ವಿಜಯಪುರ | ಸಂಪುಟ 02 | ಸಂಚಿಕೆ 23 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಮಂಗಳವಾರ, ಮಾರ್ಚ್ 12, 2024



"ವ್ಯಾಪಕವಾಗಿ ಬೆಳೆಯುತ್ತಿರುವ ಸಿಂದಗಿ ನಗರದಲ್ಲಿ 2.34ಎಕರೆಯಲ್ಲಿ ರೂ.2 ಕೋಟಿ ಅನುದಾನದಲ್ಲಿ ಟ್ರೀ ಪಾರ್ಕ್ ರೂಪುಗೊಳ್ಳಲಿದೆ. ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಉದ್ಯಾನವನಕ್ಕೆ ಮೀಸಲಿಟ್ಟ ಜಾಗೆಯನ್ನು ಅಭಿವೃದ್ಧಿ ಪಡಿಸಲು ಪಣ ತೊಟ್ಟಿದ್ದೇನೆ."

– ಅಶೋಕ ಮನಗೂಳಿ

– ಶಾಸಕರು, ಸಿಂದಗಿ

ಉದಯರಶ್ಮಿ ದಿನಪತ್ರಿಕೆ

## ಅಕ್ಕಮಹಾದೇವಿ ಮಹಿಳಾ ವಿವಿ ಘಟಿಕೋತ್ಸವದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅಭಿಮತ

# ಶಿಕ್ಷಣವು ಮಾನವೀಯತೆಯ ಪ್ರಗತಿಗೆ ಪ್ರೇರಕ ಶಕ್ತಿ

ವಿಜಯಪುರ: ರಾಷ್ಟದ ಅಭಿವೃದ್ಧಿಯಲ್ಲಿ ಮಹಿಳೆಯರ ಕೊಡುಗೆ ಬಹಳ ಮುಖ್ಯ. ಆ ದೇಶದ ಮಹಿಳೆಯರು ಅಭಿವೃದ್ಧಿಯಲ್ಲಿ ಸಂಪೂರ್ಣವಾಗಿ ಪಾಲ್ಗೊಂಡಾಗ ಮಾತ್ರ ಯಾವುದೇ ರಾಷ್ಟ್ರ ಅಭಿವೃದ್ಧಿ ಹೊಂದಲು ಸಾಧ್ಯ ಎಂದು ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಹೇಳಿದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ 15ನೇ ವಾರ್ಷಿಕ ಘಟಿಕೋತ್ಸವದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಅಂಬೇಡ್ಕರ್ ಅವರು ಹೇಳಿದ್ದರು, ನೀವು ಸಮಾಜದ ಪ್ರಗತಿಯ ಬಗ್ಗೆ ನಿಖರವಾಗಿ ತಿಳಿದುಕೊಳ್ಳಬೇಕಾದರೆ, ಆ ಸಮಾಜದ ಮಹಿಳೆಯರ ಸ್ಥಿತಿಯ ಬಗ್ಗೆ ತಿಳಿದುಕೊಳ್ಳಿ. ಇಂದಿನ ಮಹಿಳೆಯರು ಕೌಟುಂಬಿಕ ಮತ್ತು ಸಾಮಾಜಿಕ ಜವಾಬ್ದಾರಿಗಳ ಜೊತೆಗೆ ಪ್ರತಿಯೊಂದು ಕ್ಷೇತ್ರದಲ್ಲೂ ತಮ್ಮ ಕೌಶಲ್ಯವನ್ನು ಪ್ರದರ್ಶಿಸುವ ಮೂಲಕ ರಾಷ್ಟದ ಅಭಿವೃದ್ಧಿಗೆ ಕೊಡುಗೆ ನೀಡುತ್ತಿದ್ದಾರೆ ಎಂದರು.

ಲಿಂಗ ಸಮಾನತೆಯ ತತ್ವವನ್ನು ಭಾರತೀಯ ಸಂವಿಧಾನದ ಪೀಠಿಕೆ, ಮೂಲಭೂತ ಹಕ್ಕುಗಳು, ಮೂಲಭೂತ ಕರ್ತವ್ಯಗಳು ಮತ್ತು ನಿರ್ದೇಶನ ತತ್ವಗಳಲ್ಲಿ ಪ್ರತಿಪಾದಿಸಲಾಗಿದೆ. ಸಂವಿಧಾನವು ಮಹಿಳೆಯರಿಗೆ ಸಮಾನ ಸ್ಥಾನಮಾನವನ್ನು ನೀಡುವುದು ಮಾತ್ರವಲ್ಲದೆ ಮಹಿಳೆಯರ ಸಬಲೀಕರಣಕ್ಕಾಗಿ ರಾಜ್ಯಕ್ಕೆ ಹಕ್ಕುಗಳನ್ನು ನೀಡುತ್ತದೆ ಎಂದು ಹೇಳಿದರು.

ಮಹಿಳೆಯರ ಹಕ್ಕುಗಳು ಮತ್ತು ಕಾನೂನು ಹಕ್ಕುಗಳನ್ನು ರಕ್ಷಿಸಲು, 1990 ರಲ್ಲಿ ಸಂಸತ್ತಿನ ಕಾಯಿದೆಯ ಮೂಲಕ ರಾಷ್ಟ್ರೀಯ ಮಹಿಳಾ ಆಯೋಗವನ್ನು ಸ್ಥಾಪಿಸಲಾಯಿತು. ಭಾರತೀಯ ಸಂವಿಧಾನದ 73 ಮತ್ತು 74ನೇ ತಿದ್ದುಪಡಿಗಳ ಮೂಲಕ ಮಹಿಳೆಯರಿಗೆ ಪಂಚಾಯತ್ ಮತ್ತು ಪುರಸಭೆಗಳ ಸ್ಥಳೀಯ ಸಂಸ್ಥೆಗಳಲ್ಲಿ ಸ್ಥಾನಗಳ ಮೀಸಲಾತಿಯನ್ನು ಒದಗಿಸಲಾಗಿದೆ.



ಭಾರತ ಸರ್ಕಾರ ಮತ್ತು ಕರ್ನಾಟಕ ಸರ್ಕಾರವು ಮಹಿಳೆಯರನ್ನು ಆರ್ಥಿಕವಾಗಿ ಮತ್ತು ಶೈಕ್ಷಣಿಕವಾಗಿ ಸಬಲೀಕರಣಗೊಳಿಸಲು ಮತ್ತು ಅವರಿಗೆ ಅಭಿವೃದ್ಧಿ ಮತ್ತು ಭದ್ರತೆಗೆ ಅವಕಾಶಗಳನ್ನು ಒದಗಿಸಲು ವಿವಿಧ ಯೋಜನೆಗಳನ್ನು ಪ್ರಾರಂಭಿಸಿದೆ. ಬೇಟಿ ಬಚಾವೋ ಬೇಟಿ ಪಢಾವೋ, ವರ್ಕಿಂಗ್ ವುಮೆನ್ ಹಾಸ್ಟೆಲ್, ಒನ್-ಸ್ಟಾಪ್ ಸೆಂಟರ್, ಮಹಿಳಾ ಸಹಾಯವಾಣಿ, ಮಹಿಳಾ ಪೊಲೀಸ್ ಸ್ವಯಂಸೇವಕರು, ಉಜ್ವಲಾ ಯೋಜನೆ, ಮಹಿಳಾ ಶಕ್ತಿ ಕೇಂದ್ರ ಮತ್ತು ಇತರ ಹಲವು ಯೋಜನೆಗಳ ಮೂಲಕ ಭಾರತ ಸರ್ಕಾರವು ಹೆಚ್ಚು ಅಂತರ್ಗತ ಮತ್ತು ಸುರಕ್ಷಿತ ವಾತಾವರಣವನ್ನು ಸೃಷ್ಟಿಸಲು ಕೆಲಸ ಮಾಡುತ್ತಿದೆ ಎಂದು ತಿಳಿಸಿದರು.

ಶಿಕ್ಷಣವು ಮಾನವೀಯತೆಯ ಪ್ರಗತಿಗೆ ಪ್ರೇರಕ ಶಕ್ತಿ ಎಂದು ನಮಗೆಲ್ಲರಿಗೂ ತಿಳಿದಿದೆ. ಇದು ರಾಷ್ಟವನ್ನು ಹೆಚ್ಚು ಶಕ್ತಿಯುತ ಮತ್ತು ಶ್ರೇಷ್ಠವನ್ನಾಗಿ ಮಾಡುವ ಸಾಮರ್ಥ್ಯವನ್ನು ಹೊಂದಿದೆ. ರಾಷ್ಟದ ಪ್ರಗತಿಯಲ್ಲಿ ಶಿಕ್ಷಣದ ಪ್ರಾಮುಖ್ಯತೆಯನ್ನು ನೀತಿ ನಿರೂಪಕರು ಅರಿತುಕೊಂಡಿದ್ದಾರೆ ಮತ್ತು ಆದ್ದರಿಂದ ಇತ್ತೀಚಿನ ದಶಕಗಳಲ್ಲಿ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಹೇಳಿದರು.

ಈ ಮಹಿಳಾ ವಿಶ್ವವಿದ್ಯಾಲಯವು ಶಿಕ್ಷಣದ ಮೂಲಕ ಮಹಿಳಾ ಸಬಲೀಕರಣಕ್ಕಾಗಿ ನಿರಂತರವಾಗಿ ಕಾರ್ಯನಿರ್ವಹಿಸುತ್ತಿರುವುದು ಸಂತೋಷದ ವಿಷಯವಾಗಿದೆ, ಇದಕ್ಕಾಗಿ ವಿಶ್ವವಿದ್ಯಾಲಯದ ಕುಟುಂಬದ ಎಲ್ಲ ಸದಸ್ಯರಿಗೆ ಅಭಿನಂದನೆಗಳು. ಪದವಿ ಸ್ವೀಕರಿಸಿದ ಎಲ್ಲಾ ವಿದ್ಯಾರ್ಥಿನಿಯರು ದೇಶವನ್ನು ಸರ್ವೋಚ್ಚ ಎಂದು ಪರಿಗಣಿಸಿ, ದೇಶದ ಆರ್ಥಿಕತೆಯನ್ನು ಬಲಪಡಿಸಲು ಮತ್ತು ದೇಶವನ್ನು ಅಭಿವೃದ್ಧಿ ಹೊಂದಿದ ರಾಷ್ಟವನ್ನಾಗಿ ಮಾಡಲು ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.

ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ: ಬಿ.ಕೆ.ತುಳಸಿಮಾಲಾ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಹರಿಯಾಣದ ಕೇಂದ್ರೀಯ ವಿಶ್ವವಿದ್ಯಾನಿಲಯದ ಸಮಕುಲಪತಿ ಪ್ರೊ: ಸುಷ್ಮಾ ಯಾದವ ವಿಡಿಯೋ ಕಾನ್ಫರೆನ್ಸ್ ಮೂಲಕ ಘಟಿಕೋತ್ಸವ ಭಾಷಣ ಮಾಡಿದರು.

ಘಟಿಕೋತ್ಸವದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿರುವ ಮಾತೋಶ್ರೀ ಡಾ.ದಾಕ್ಷಾಯಿಣಿ ಎಸ್ ಅಪ್ಪಾ ಹಾಗೂ ಡಾ.ಸಂಧ್ಯಾ ಪುರೇಚ ಅವರಿಗೆ ಗೌರವಾನ್ವಿತ ರಾಜ್ಯಪಾಲರು ಮತ್ತು ವಿಶ್ವವಿದ್ಯಾನಿಲಯದ ಕುಲಾಧಿಪತಿಗಳೂ ಆಗಿರುವ ಥಾವರಚಂದ್ ಗೆಹ್ಲೋಟ್ ಅವರಿಂದ ಡಾಕ್ಟರೇಟ್ ಪದವಿ ಪ್ರದಾನ ಮಾಡಲಾಯಿತು. ವಿವಿಧ ಸ್ನಾತಕ-ಸ್ನಾತಕೋತ್ತರ 77 ವಿದ್ಯಾರ್ಥಿನಿಯರಿಗೆ 80 ಚಿನ್ನದ ಪದಕಗಳನ್ನು ಪ್ರದಾನ ಮಾಡಲಾಯಿತು. 48 ವಿದ್ಯಾರ್ಥಿನಿಯರಿಗೆ ಪಿಎಚ್.ಡಿ ಪದವಿ ಪ್ರದಾನ ಮಾಡಲಾಯಿತು.

ಈ ಸಂದರ್ಭದಲ್ಲಿ ಕುಲಸಚಿವ ಶಂಕರಗೌಡ ಸೋಮನಾಳ, ಮೌಲ್ಯಮಾಪನ ಕುಲಸಚಿವ ಎಚ್.ಎಂ.ಚಂದ್ರಶೇಖರ, ಪ್ರೊ: ಓಂಕಾರ ಕಾಕಡೆ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

### ಮಹಿಳೆ ಸಬಲೀಕರಣ ಹೊಂದಲು ಶಿಕ್ಷಣವೊಂದೇ ಮಾರ್ಗ :ಸಚಿವ ಸುಧಾಕರ




ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ ಅವರು ಮಾತನಾಡಿ, ಮಹಿಳೆಯರು ಸ್ವಾವಲಂಬಿಯಾಗುವ ನಿಟ್ಟಿನಲ್ಲಿ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿ ಮಹಿಳಾ ವಿಶ್ವವಿದ್ಯಾಲಯವು ಈ ಭಾಗದ ಮಹಿಳೆಯರಿಗೆ ಉತ್ಕೃಷ್ಟವಾದ ಶಿಕ್ಷಣ ನೀಡುತ್ತಿದೆ. ಪುರುಷ ಪ್ರದಾನವಾದ ಈ ಸಮಾಜದಲ್ಲಿ ಮಹಿಳೆ ಇನ್ನಷ್ಟು ಸಬಲೀಕರಣ ಹೊಂದಲು ಶಿಕ್ಷಣವೊಂದೆ ಮಾರ್ಗವಾಗಿದೆ. ರಾಜ್ಯದಲ್ಲಿಯೇ ಏಕೈಕ ಮಹಿಳಾ ವಿಶ್ವವಿದ್ಯಾಲಯ ಇದಾಗಿದ್ದು, ಮಹಿಳೆ ಎಲ್ಲ ರಂಗಗಳಲ್ಲೂ ಮುಂಚೂಣಿಯಲ್ಲಿದೆ. ಪೋಷಕರು ತಹ ತಮ್ಮ ಮಕ್ಕಳ ಶಿಕ್ಷಣದ ಕುರಿತು ಅರಿವು ಹೊಂದಿದ್ದು, ಎಲ್ಲ ಕ್ಷೇತ್ರಗಳಲ್ಲಿಯೂ ಸಹ ಮಹಿಳೆ ಅತ್ಯುನ್ನತ ಸ್ಥಾನ, ಸಾಧನೆಗೈಯುತ್ತಿರುವುದು ಹೆಮ್ಮೆಯ ವಿಷಯವಾಗಿದೆ ಎಂದು ಹೇಳಿದರು.

ಉನ್ನತ ಶಿಕ್ಷಣದಲ್ಲಿ ಶೇ.48ಕ್ಕೂ ಹೆಚ್ಚು ಮಹಿಳೆಯರಿದ್ದಾರೆ. ಈ ಪ್ರಮಾಣ ಇನ್ನಷ್ಟು ಹೆಚ್ಚಿಸಲು ಹಲವಾರು ವಿಷಯಗಳ ಕುರಿತು ಅಧ್ಯಯನ ನಡೆಸಿ ಕ್ರಮ ವಹಿಸಲಾಗುತ್ತಿದೆ ಎಂದು ಹೇಳಿದರು.

### ರಾಜ ನುಡಿ

ಸಮಯವನು ಕೊಂದಾಗ ಅವಕಾಶಗಳು ಸಾಯುತ್ತವೆ. ಭಾವನೆಗಳನು ಕೊಂದಾಗ ಬಂಧಗಳು ಬಿಕ್ಕುತ್ತವೆ. ಸಮಯ ಮತ್ತು ಭಾವನೆಗಳ ಮೇಲೆಯೇ ಬದುಕು ಜೀವಿಸುತ್ತಿರುತ್ತದೆ. ಜೀವಂತಿಕೆಗೆ ಎರಡನ್ನೂ ಗೌರವಿಸಿ.

–ಡಾ. ರಾಜಶೇಖರ ನಾಗೂರ



### ವಚನ ಚಿಂತನ 320

**ಪಶ್ಚಿಮದ ಕದವ ತೆಗೆದರೆ ಬಚ್ಚಬರಿಯ ಬೆಳಗು**

*ಪಶ್ಚಿಮದ ಕದವ ತೆಗೆದು*
*ಬಚ್ಚಬರಿಯ ಬೆಳಗ ನೋಡಲೊಲ್ಲದೆ,*
*ಕತ್ತಲೆಯ ಬಾಗಿಲಿಗೆ ಮುಗ್ಗಿ,*
*ಕಣ್ಣುಕಾಣದ ಅಂಧಕನಂತೆ ಜಾರಿ ಜರಿಯಲ್ಲಿ ಬಿದ್ದು,*
*ಕರ್ಮಕ್ಕೆ ಗುರಿಯಾಗುವ ಮತ್ರ್ಯದ ಮನುಜರಿರಾ,*
*ನೀವು ಕೇಳಿರೋ ಹೇಳಿಹೆನು, ನಮ್ಮ ಶರಣರ ನಡೆ ಎಂತೆಂದಡೆ*
*ಕತ್ತಲೆಯ ಬಾಗಿಲಿಗೆ ಕದವನಿಕ್ಕಿ, ಪಶ್ಚಿಮದ ಕದವ ತೆಗೆದು,*
*ಬಚ್ಚಬರಿಯ ಬೆಳಗಿನೊಳಗೋಲಾಡುವ ಶರಣರ ಪಾದಕ್ಕೆನಮೋ*
*ಎಂದು ಸುಖಿಯಾದೆನಯ್ಯಾ, ಅಪ್ಪಣ್ಣಪ್ರಿಯ ಚೆನ್ನಬಸವಣ್ಣಾ*
*– ಹಡಪದಅಪ್ಪಣ್ಣಗಳ ಪುಣ್ಯಸ್ತ್ರೀ ಲಿಂಗಮ್ಮನವರು*

ಮಾನವನಾಗಿ ಜನಿಸಿದ ಪ್ರತಿಯೊಬ್ಬರ ಅಂಗದಲ್ಲಿಯೂ ಅಗಾದವಾದ ಮಹಾಲಿಂಗದ ಚೈತನ್ಯವು ಅಡಗಿರುತ್ತದೆ, ಆ ಶಕ್ತಿಯ ಅರಿವನ್ನು ಅರಿತು ಸದ್ಬಳಕೆ ಮಾಡಿಕೊಳ್ಳದೆ ಮಾನವ ಜನ್ಮದ ಸಾರ್ಥಕತೆಯನ್ನು ವಿಫಲಗೊಳಿಸುತ್ತಿರುವವರ ಕುರಿತು ಹಡಪದಅಪ್ಪಣ್ಣಗಳ ಪುಣ್ಯಸ್ತ್ರೀ ಲಿಂಗಮ್ಮನವರು ಈ ವಚನದಲ್ಲಿ ಮರುಗಿದ್ದಾರೆ. ಪ್ರತಿಯೊಬ್ಬರ ಅಂಗದಲ್ಲಿ ಶಕ್ತಿಯು ಚಕ್ರಗಳ ರೂಪದಲ್ಲಿ ವಿವಿಧ ಸ್ಥಾನದಲ್ಲಿ ತಲೆಕೆಳಗಾದ ಪದ್ಮದ ರೀತಿಯಲ್ಲಿ ಅಡಗಿದೆ, ಅದನ್ನು ಜಾಗೃತಗೊಳಿಸಲು ವಿವಿಧ ದಾರ್ಶನಿಕರು ವಿವಿಧ ಮಾರ್ಗವನ್ನು ಹೇಳಿದ್ದಾರೆ, ಅವರ ಮಾರ್ಗವು ಕಠಿಣವಾಗಿದ್ದು ಸಾಮಾನ್ಯಜನರು ಅನುಸರಿಸಲು ಸಾಧ್ಯವಾಗದ ರೀತಿ ನಿಯಮಗಳನ್ನು ಒಳಗೊಂಡಿವೆ, ಆದರೆ 12ನೇ ಶತಮಾನದಲ್ಲಿಯ ಬಸವಾದಿ ಶರಣರು ಈ ಚಕ್ರಗಳ ಜಾಗೃತಿಗೆ ಇಷ್ಟಲಿಂಗದ ನಿರೀಕ್ಷಣೆಯ ಮಾರ್ಗವನ್ನು ಬಳಸುವುದರ ಮೂಲಕ ಈ ಕಠಿಣ ಮಾರ್ಗವನ್ನು ಸುಲಭಗೊಳಿಸಿದರು ಅದರ ಪ್ರಯುಕ್ತವಾಗಿ ಅನೇಕ ಶರಣರು ಅಂಗದೊಳಗಿನ ಮಹಾಲಿಂಗವನ್ನು ಬೆಳಗಿನ ರೂಪದಲ್ಲಿ ದರ್ಶನಗೈದಿರುವ ಬಗ್ಗೆ ತಮ್ಮ ವಚನಗಳಲ್ಲಿ ಹೇಳಿಕೊಂಡಿದ್ದಾರೆ. ಮೂಲಾಧಾರ ಚಕ್ರದಿಂದ ಸ್ವಾಧಿಷ್ಟಾನ, ಮಣಿಪುರ, ಅನಾಹತ, ವಿಶುದ್ಧ, ಆಜ್ಞಾ, ಸಹಸ್ರಾರ ಚಕ್ರದವರೆಗೆ ಶಕ್ತಿ ಸಂಚಲನವಾದ ನಂತರ ತಲೆಯ ಹಿಂಬಾಗದ ಪಶ್ಚಿಮದ್ವಾರ ಅಂದರೆ ಹಿಮ್ಮೆದುಳಿನ ಪಿಟ್ಯುಟರಿ ಗ್ಲ್ಯಾಂಡನಲ್ಲಿಯ ಶಕ್ತಿ ಸ್ಥಳವನ್ನು ಪಶ್ಚಿಮದ ಕದವೆಂದು ಕರೆದಿದ್ದಾರೆ, ಇದನ್ನು ಜಾಗೃತೊಳಿಸುವುದರ ಮೂಲಕ ಅಲ್ಲಿ ಮೆಲಾಟನಿನ್ ದ್ರವವು ಸ್ರವಿಸುತ್ತದೆ, ಈ ದ್ರವವು ಅಂಗವನ್ನು ಸೇರಿದಾಗ ಅವರ್ಣನೀಯ ಅನುಭೂತಿ ಉಂಟಾಗುತ್ತದೆ. ಇದನ್ನೇ ಲಿಂಗಮ್ಮನವರು ಅನುಭವಿಸಿ ಹೇಳಿದ್ದು "ಕತ್ತಲೆಯ ಬಾಗಿಲಿಗೆ ಕದವನಿಕ್ಕಿ, ಪಶ್ಚಿಮದ ಕದವ ತೆಗೆದು, ಬಚ್ಚಬರಿಯ ಬೆಳಗಿನೊಳಗೋಲಾಡುವ ಶರಣರ ಪಾದಕ್ಕೆನಮೋ ಎಂದು ಸುಖಿಯಾದೆನಯ್ಯಾ," ಇಷ್ಟಲಿಂಗ ನಿರೀಕ್ಷೆಯ ಮೂಲಕ ಈ ಅನುಭಾವವನ್ನು ಎಲ್ಲರೂ ಪಡೆಯಬಹುದು 'ಪಶ್ಚಿಮದ ಕದವ ತೆಗೆದು ಬಚ್ಚಬರಿಯ ಬೆಳಗ ನೋಡಲೊಲ್ಲದೆ, ಕತ್ತಲೆಯ ಬಾಗಿಲಿಗೆ ಮುಗ್ಗಿ, ಕಣ್ಣುಕಾಣದ ಅಂಧಕನಂತೆ ಜಾರಿ ಜರಿಯಲ್ಲಿ ಬಿದ್ದು, ಕರ್ಮಕ್ಕೆ ಗುರಿಯಾಗದಿರಿ ಮತ್ರ್ಯದ ಮನುಜರಿರಾ,' ಎಂದಿದ್ದಾರೆ. ಶರಣರ ಮಾರ್ಗದಲ್ಲಿ ನಡೆದು ಬೆಳಗ ಬೆರಗ ಕಾಣೋಣ...

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

# ಕಂದಕ ತೆರವುಗೊಳಿಸಿ ದಾರಿ ಸಮಸ್ಯೆ ಇತ್ಯರ್ಥಪಡಿಸಲು ರೈತರ ಆಗ್ರಹ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ತಾಲೂಕಿನ ಉಕ್ಕಲಿ ಗ್ರಾಮದಿಂದ ಹೊನ್ನುಟಗಿ ಗ್ರಾಮಕ್ಕೆ ಹೋಗುವ ರೈತರ ಜಮೀನುಗಳ ದಾರಿ ಸಮಸ್ಯೆ ಇತ್ಯರ್ಥಪಡಿಸುವಂತೆ ಆಗ್ರಹಿಸಿ ಸೋಮವಾರ ಉಕ್ಕಲಿ ಗ್ರಾಮದ ರೈತರು ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಗ್ರಾಮದ ನೀಲಪ್ಪ ಮಸಳಿ ಮಾತನಾಡಿ, ಉಕ್ಕಲಿ ಗ್ರಾಮಕ್ಕೆ ಹೊಂದಿಕೊಂಡಂತೆ ಇರುವ ಜಮೀನು ಸ.ನಂ. 980 ಅಪ್ಪಾಸಾಹೇಬ ಕಾಸಪ್ಪ ಕಲಗೊಂಡ ಎಂಬುವವರಿಗೆ ಸೇರಿದೆ. ಇವರು ಕಳೆದ ಒಂದೂವರೆ-ಎರಡು ತಿಂಗಳಿನಿಂದ ಜಮೀನಿಗೆ ಹೊಂದಿಕೊಂಡಿರುವ ರಸ್ತೆಯನ್ನು ಆಳವಾಗಿ ಗುಂಡಿ ತೋಡಿ ಮುಂದೆ ಸಾಗುವ ರಸ್ತೆಯನ್ನು ಸ್ಥಗಿತಗೊಳಿಸಿರುತ್ತಾರೆ. ಈ ಮಾರ್ಗದಲ್ಲಿರುವ ಗ್ರಾಮದ ಸುಮಾರು 30-40 ರೈತರು ತಮ್ಮ ತಮ್ಮ ಜಮೀನುಗಳಿಗೆ ಸಂಚರಿಸಲು ಪರದಾಡುವಂತಾಗಿದೆ. ಉಕ್ಕಲಿಯಿಂದ ಹೊನ್ನುಟಗಿ ಗ್ರಾಮಕ್ಕೆ ಹೋಗುವ ಚಾಲ್ತಿಯಲ್ಲಿರುವ ರಸ್ತೆ ಸರಕಾರಿ ರಸ್ತೆಯಾಗಿರುತ್ತದೆ. ಈ ರಸ್ತೆ ಮಾರ್ಗವಾಗಿ ಹಲವಾರು ವರ್ಷಗಳಿಂದ ರೈತರು, ಜನರು ಸಂಚಾರ ಮಾಡುತ್ತಿದ್ದಾರೆ. ಇವರು ಈಗ ರಸ್ತೆಯನ್ನು ಬಂದ್ ಮಾಡಿರುವದರಿಂದಾಗಿ ತುಂಬಾ ತೊಂದರೆಯಾಗಿದೆ. ರಸ್ತೆ ಬಂದ್ ಮಾಡಿರುವದಿಂದಾಗಿ ಈ ರಸ್ತೆಯಲ್ಲಿರುವ ಜಮೀನಗಳ ರೈತರು ಬೆಳೆ ರಾಶಿಯನ್ನು ಕಷ್ಟಪಟ್ಟು ಮಾಡಿಕೊಂಡು ಬಂದಿದ್ದಾರೆ. ತಹಸೀಲ್ದಾರರು ರೈತರಿಗೆ ಜಮೀನುಗಳಿಗೆ ಹೋಗಲು ದಾರಿ ಮಾಡಿಕೊಡಬೇಕೆಂದು ಮನವಿ ಮಾಡಿಕೊಂಡರು.



ರೈತರ ಪ್ರತಿಭಟನೆಗೆ ಬೆಂಬಲ ಸೂಚಿಸಿದ ಕರವೇ ಜಿಲ್ಲಾ ಯುವ ಘಟಕ ಅಧ್ಯಕ್ಷ ಅಶೋಕ ಹಾರಿವಾಳ ಮಾತನಾಡಿ, ಗ್ರಾಮದ ಅಪ್ಪಾಸಾಹೇಬ ಕಲಗೊಂಡ ಅವರು ದಾರಿ ಬಂದ್ ಮಾಡಿ ರೈತರಿಗೆ ತೊಂದರೆ ಮಾಡಿರುವದು ಸರಿಯಲ್ಲ. ಇದರಿಂದ ರೈತರು ಜಮೀನುಗಳಿಗೆ ಸಂಚರಿಸಲು ಪರದಾಡುವಂತಾಗಿದೆ. ಕೂಡಲೇ ಸಂಬಂಧಿಸಿದ ಅಧಿಕಾರಿಗಳು ರಸ್ತೆಯನ್ನು ಸರ್ವೇ ಮಾಡಿ ರೈತರಿಗೆ ಅನುಕೂಲ ಕಲ್ಪಿಸಬೇಕು. ಇಲ್ಲವಾದರೇ ಕರವೇ ನೇತೃತ್ವದಲ್ಲಿ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮನವಿ ಸ್ವೀಕರಿಸಿದ ತಹಸೀಲ್ದಾರ ವೈ.ಎಸ್. ಸೋಮನಕಟ್ಟಿ ಅವರು ಉಕ್ಕಲಿ ಗ್ರಾಮದ ಸರ್ವೆ ನಂ.980 ಜಮೀನಿಗೆ ಹೊಂದಿಕೊಂಡಿರುವ ರಸ್ತೆಯನ್ನು ಆಳವಾಗಿ ಗುಂಡಿ ತೊಡಿ ಮುಂದೆ ಸಾಗುವ ರಸ್ತೆಯನ್ನು ಸ್ಥಗಿತಗೊಳಿಸಿದ್ದಾರೆ. ಈ ರಸ್ತೆ ಗ್ರಾಮ ನಕಾಶೆಯಲ್ಲಿ ಇರುವ ಇಲ್ಲದಿರುವ ಕುರಿತು ಭೂ ದಾಖಲೆಗಳ ಸಹಾಯಕ ನಿರ್ದೇಶಕರಿಗೆ ವರದಿ ನೀಡಲು ಪತ್ರ ಬರೆದರು.

ಈ ಸಂದರ್ಭದಲ್ಲಿ ಚಂದ್ರಶೇಖರ ಮಸಳಿ, ಗೌಡಪ್ಪ ಓಜಿ, ಬಾಬಾಸಾಹೇಬ ಮಸಳಿ, ಬಿ.ಎಸ್ .ತೆಲಸಂಗ, ಎಸ್ .ಎನ್. ಇಂಡಿ, ಎನ್. ಎಸ್. ಮದ್ದರಿಮಠ, ವಿ. ಬಿ. ಕುಲಕರ್ಣಿ, ಚಂದ್ರಾಮ ಭಜಂತ್ರಿ, ಎಂ.ಎ. ಮಸಳಿ,ರಮೇಶ ನರಸರೆಡ್ಡಿ, ಈರಣ್ಣ ಚಿನಿವಾಲ ಇತರರು ಇದ್ದರು.

## ಐತಿಹಾಸಿಕ ಬೇಗಂ ತಾಲಾಬ್ ಗೆ ಭೇಟಿ ನೀಡಿದ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅಧಿಕಾರಿಗಳಿಗೆ ಸೂಚನೆ

# ಪ್ರವಾಸಿಗರನ್ನು ಆಕರ್ಷಿಸಲು ಕ್ರಿಯಾ ಯೋಜನೆ ರೂಪಿಸಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಅವರು ರವಿವಾರ ನಗರದ ಐತಿಹಾಸಿಕ ಬೇಗಂ ತಾಲಾಬ್ ಗೆ ಭೇಟಿ ನೀಡಿ ಆದಿಲ್ ಶಾಹಿ ಕಾಲದಲ್ಲಿ ನಗರಕ್ಕೆ ನೀರು ಪೂರೈಸಲಾಗುತ್ತಿದ್ದ ವ್ಯವಸ್ಥೆಯನ್ನು ಪರಿಶೀಲಿಸಿದರು.

ಬೆಳಿಗ್ಗೆ ಬೇಗಂ ತಾಲಾಬ್ ಕೆರೆಗೆ ಭೇಟಿ ನೀಡಿದ ಅವರು, ಅಲ್ಲಿ 400 ವರ್ಷಗಳ ಹಿಂದೆ ಆದಿಲ್ ಶಾಹಿ ಕಾಲದಲ್ಲಿ ಪೈಪಲೈನ್ ಮೂಲಕ ನಗರದ ಸುಮಾರು 10 ಲಕ್ಷ ಜನಸಂಖ್ಯೆಗೆ ಕುಡಿಯಲು ನೀರು ಪೂರೈಸಲು ನಿರ್ಮಿಸಲಾಗಿರುವ ವ್ಯವಸ್ಥೆಯನ್ನು ವೀಕ್ಷಿಸಿ ಪರಿಶೀಲನೆ ನಡೆಸಿದರು. ಗಚ್ಚು ತಂತ್ರಜ್ಞಾನ ಬಳಸಿ ತಯಾರಿಸಲಾದ ಡೆಲಿವರಿ ಚೇಂಬರ್ ಮತ್ತು ನೀರು ಸ್ಥಗಿತಗೊಳಿಸಲು ಅಳವಡಿಸಲಾಗಿರುವ ಸಾಗವಾನಿ ಕಟ್ಟಿಗೆಯಿಂದ ನಿರ್ಮಿಸಲಾಗಿರುವ ಗೇಟು ವಾಲ್ವ್ ವೀಕ್ಷಿಸಿದರು. ಅಲ್ಲಲ್ಲಿ ತುಂಬಿರುವ ಹೂಳನ್ನು ತೆಗೆದು ಸ್ವಚ್ಛಗೊಳಿಸಿ ದುರಸ್ಥಿ ಮಾಡುವಂತೆ ಸಚಿವರು ಪೌರಾಯುಕ್ತರಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಸಚಿವರು ಆದಿಲ್ ಶಾಹಿ ಕಾಲದಲ್ಲಿ ಗುರುತ್ವಾಕರ್ಷಣ ಶಕ್ತಿಯ ಮೇಲೆ ನಗರಕ್ಕೆ ನೀರು ಪೂರೈಕೆ ವ್ಯವಸ್ಥೆಯನ್ನೂ ಪರಿಶೀಲಿಸಿದರು. ಅಲ್ಲದೇ, ಸುಮಾರು ಒಂದು ಕಿ. ಮೀ. ವರೆಗೆ ತೆರಳಿ ಈ ವ್ಯವಸ್ಥೆಯ 4 ಡೆಲಿವರಿ ಚೇಂಬರ್ ವೀಕ್ಷಿಸಿದರು. ಒಂದು ಕಡೆ 50 ಅಡಿ ಮತ್ತೊಂದು ಕಡೆ ಸುಮಾರು 90 ಅಡಿ ಆಳದಲ್ಲಿ ಕೊಳವೆ ಮಾರ್ಗಗಳಲ್ಲಿ ನೀರು ಸರಬರಾಜು ಆಗುತ್ತಿರುವುದನ್ನು ಗಮನಿಸಿದರು.



ಈ ಐತಿಹಾಸಿಕ ವ್ಯವಸ್ಥೆಯ ಮೂಲಕ ವಿಜಯಪುರ ನಗರಕ್ಕೆ ಕುಡಿಯಲು ನೀರು ಪೂರೈಸುವ ಸಾಧ್ಯತೆಗಳ ಕುರಿತು ಪರಿಶೀಲನೆ ನಡೆಸುವಂತೆ ಸಚಿವರು ಸ್ಥಳದಲ್ಲಿ ಉಪಸ್ಥಿತ-ರಿದ್ದ ಅಧಿಕಾರಿಗಳಿಗೆ ಸೂಚನೆ ನೀಡಿದರು.


ಇದೇ ವೇಳೆ, ಕರೆಜ್ ವ್ಯವಸ್ಥೆಯ ಕುರಿತೂ ಗಮನ ಹರಿಸಿದ ಸಚಿವರು, ಐತಿಹಾಸಿಕ ನೀರು ಪೂರೈಕೆ ವ್ಯವಸ್ಥೆ ಮತ್ತು ಕರೆಜ್ ವ್ಯವಸ್ಥೆ ಪ್ರವಾಸಿಗರನ್ನು ಸೆಳೆಯುತ್ತವೆ. ಈ ಹಿನ್ನೆಲೆಯಲ್ಲಿ ಪ್ರವಾಸೋದ್ಯಮ ಸಚಿವರೊಂದಿಗೆ ಬೆಂಗಳೂರಿನಲ್ಲಿ ಸಭೆ ನಡೆಸಿ ಪ್ರವಾಸಿಗರನ್ನು ಆಕರ್ಷಿಸಲು ಕ್ರಿಯಾ ಯೋಜನೆ ರೂಪಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಅಲ್ಲದೇ, ಪ್ರವಾಸೋದ್ಯಮ ಸಚಿವ ಎಚ್. ಕೆ. ಪಾಟೀಲ ಅವರೊಂದಿಗೆ ದೂರವಾಣಿಯಲ್ಲಿ ಮಾತನಾಡಿ, ಐತಿಹಾಸಿಕ ನೀರು ಸರಬರಾಜು ವ್ಯವಸ್ಥೆಯ ಕುರಿತು ಮಾಹಿತಿ ನೀಡಿದರು. ವಿಜಯಪುರ ಜಿಲ್ಲೆಯ ಅಧಿಕಾರಿಗಳು ಬೆಂಗಳೂರಿಗೆ ಬಂದು ತಮ್ಮನ್ನು ಭೇಟಿ ಮಾಡಲಿದ್ದು, ಈ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಪ್ರವಾಸೋದ್ಯಮ ಸಚಿವರನ್ನು ಎಂ. ಬಿ. ಪಾಟೀಲ ಅವರು ಕೋರಿದರು.

ಈ ಸಂದರ್ಭದಲ್ಲಿ ಇತಿಹಾಸ ತಜ್ಞರಾದ ಕೃಷ್ಣ ಕೊಲ್ಹಾರ ಕುಲಕರ್ಣಿ, ಡಾ. ಎಚ್. ಜಿ. ದಡ್ಡಿ, ಉಪಮೇಯರ್ ದಿನೇಶ ಹಳ್ಳಿ, ಕೆಬಿಜೆಎ□□□ಲ್ ಅಧೀಕ್ಷಕ ಅಭಿಯಂತರರಾದ ಜಗದೀಶ ರಾಠೋಡ, ಗೋವಿಂದ ರಾಠೋಡ, ಕಾರ್ಯನಿರ್ವಾಹಕ ಅಭಿಯಂತರ ನಾಗರಾಳ, ಮಹಾನಗರ ಪಾಲಿಕೆ ಆಯುಕ್ತ ಬದ್ರುದ್ದೀನ್ ಸೌದಾಗರ, ಮಾಜಿ ಕಾರ್ಪೋರೇಟರ್ ಅಬ್ದುಲ್ ರಜಾಕ್ ಹೊರ್ತಿ, ಡಾ. ಮಹಾಂತೇಶ ಬಿರಾದಾರ ಮುಂತಾದವರು ಉಪಸ್ಥಿತರಿದ್ದರು.

## ಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ ಮನವಿ

# ಬಣ್ಣದಾಟ ಮನೆಗಷ್ಟೇ ಸೀಮಿತಗೊಳ್ಳಲಿ

**ಉದಯರಶ್ಮಿ ನ್ಯೂಸ್**



ವಿಜಯಪುರ: ಭೀಕರ ಬರಗಾಲ ಹಾಗೂ ನೀರಿನ ಅಭಾವವಿರುವ ಕಾರಣ ಈ ಬಾರಿ ಹೋಳಿ ಹಬ್ಬದ ಪ್ರಯುಕ್ತ ಸಾರ್ವಜನಿಕವಾಗಿ ಬಣ್ಣದಾಟ ಆಡುವುದನ್ನು ಬಿಟ್ಟು ಮನೆಗಷ್ಟೇ ಬಣ್ಣದಾಟ ಸೀಮಿತಗೊಳಿಸುವುದು ಒಳಿತು ಎಂದು ಬಿಜೆಪಿ ಎಸ್.ಸಿ. ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ ಮನವಿ ಮಾಡಿಕೊಂಡಿದ್ದಾರೆ.

ಈ ಕುರಿತು ಸೋಮವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು, ಹೋಳಿ ಹಬ್ಬ ಎಂದರೆ ಅದರ ಸಂಭ್ರಮವೇ ಬೇರೆ, ಪ್ರತಿ ವರ್ಷ ಅನೇಕ ಸಂಘ-ಸಂಸ್ಥೆಗಳು ರಂಗ ಹೋಲಿಕ ಸೇರಿದಂತೆ ಹಲವಾರು ರೀತಿಯ ಸಾರ್ವಜನಿಕ ಬಣ್ಣದಾಟದ ಕಾರ್ಯಕ್ರಮ ಏರ್ಪಡಿಸುತ್ತಾರೆ, ಯುವಜನತೆ ಸಕ್ರೀಯವಾಗಿ ಈ ಹಬ್ಬದಾಟದಲ್ಲಿ ತೊಡಗುತ್ತಾರೆ, ಆದರೆ ಕಳೆದೆರಡು ವರ್ಷಗಳಿಂದ ವರುಣನ ಕೃಪೆಯಾಗಿಲ್ಲ, ರೈತರು ಸಹ ತೊಂದರೆಯಲ್ಲಿದ್ದಾರೆ, ಜಲಮೂಲಗಳು ಅಷ್ಟೇ ಏಕೆ ಅಂತರ್ಜಲ ಸಹ ಸೊರಗುವ ಹಂತಕ್ಕೆ ತಲುಪಿದೆ. ಇಂತಹ ಸಂದರ್ಭದಲ್ಲಿ ಸಾರ್ವಜನಿಕ ಬಣ್ಣದಾಟದ ಆಚರಣೆಗೆ ಈ ಬಾರಿ ಬ್ರೇಕ್ ಹಾಕಿದರೆ ನೀರಿನ ಮಿತವ್ಯಯ ಸಾಧಿಸಬಹುದಾಗಿದೆ, ಸಂಘ-ಸಂಸ್ಥೆಗಳು ಸಹ ಈ ಬಾರಿ ಈ ಬೃಹತ್ ಬಣ್ಣದಾಟ ಆಯೋಜಿಸುವ ಬದಲು ನೀರಿನ ಅರವಟಿಗೆ, ಪಶು-ಪಕ್ಷಿಗಳಿಗಾಗಿ ನೀರಿನ ಅರವಟಿಗೆ ಸ್ಥಾಪಿಸುವುದು ಒಳಿತು, ಮುಂದೆ ವರುಣನ ಕೃಪೆಯಾದರೆ ಹಿಂದೆಂದಿಗಿಂತಲೂ ಸಂಭ್ರಮದಿಂದ ಸಾರ್ವಜನಿಕ ಬಣ್ಣದಾಟವನ್ನು ಸಂಭ್ರಮಿಸೋಣ, ಈ ವರ್ಷ ಸಾರ್ವಜನಿಕ ಬಣ್ಣದಾಟ ಬೇಡ ಎಂದು ಅವರು ಮನವಿ ಮಾಡಿಕೊಂಡಿದ್ದಾರೆ.

# ದಾಖಲಾತಿಯಲ್ಲಿ ಇತಿಹಾಸ ಸೃಷ್ಟಿಯಾಗಲಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ಜೂನ್ ನಂತರ ಸರ್ಕಾರಿ ಶಾಲೆಗಳ ಪ್ರವೇಶ ದಾಖಲಾತಿಯಲ್ಲಿ ವಿಜಯಪುರ ನಗರ ಇತಿಹಾಸ ಸೃಷ್ಟಿಸುವಂತಾಗಬೇಕು ಎಂದು ನಗರ ಶಾಸಕ ಬಸನಗೌಡ ರಾ.ಪಾಟೀಲ ಯತ್ನಾಳ ಅವರು ಹೇಳಿದರು.

ನಗರದ ವಾರ್ಡ ನಂ.13ರಲ್ಲಿ ಬರುವ ಶಾಪೇಟೆ ಸರ್ಕಾರಿ ಕೆಬಿಎಸ್ ನಂ.7 ಮತ್ತು 8 ರಲ್ಲಿ ವಿವೇಕ ಶಾಲಾ ಕೊಠಡಿ ಯೋಜನೆಯಡಿ ನೂತನವಾಗಿ ನಿರ್ಮಾಣ ಮಾಡಲಾದ 4 ಶಾಲಾ ಕೊಠಡಿಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಗರದ ಸರ್ಕಾರಿ ಶಾಲೆಗಳಲ್ಲಿ ದಾಖಲೆ ಪ್ರಮಾಣದಲ್ಲಿ ಮಕ್ಕಳ ಪ್ರವೇಶ ಆಗುತ್ತಿದೆ ಎಂಬ ಸಂದೇಶ ಇಡೀ ರಾಜ್ಯಕ್ಕೆ ಹೋಗುವ ರೀತಿಯಲ್ಲಿ, ನಮ್ಮ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿಪಡಿಸಿ, ಅತ್ಯುತ್ತಮ ಶಿಕ್ಷಣ ನೀಡುವ ನಿಟ್ಟಿನಲ್ಲಿ ಮಾಡೋಣ, ಬಡವರು, ಶ್ರೀಮಂತರು ಎನ್ನದೇ, ಎಲ್ಲಾ ಮಕ್ಕಳು ಸಹ ನಮ್ಮ ಸರ್ಕಾರಿ ಶಾಲೆಗಳಿಗೆ ಪ್ರವೇಶಕ್ಕೆ ಕ್ಯೂ ನಿಲ್ಲಬೇಕು ಎಂದರು.

ಈಗಾಗಲೇ ನಗರದ ಬಹುತೇಕ ಸರ್ಕಾರಿ ಶಾಲೆಗಳಿಗೆ ಸಮರ್ಪಕವಾಗಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. ಉಳಿದಿರುವ ಶಾಲೆಗಳ ಶಿಥಿಲ ಕೊಠಡಿಗಳನ್ನು ಮಕ್ಕಳ ಸುರಕ್ಷತೆ ದೃಷ್ಟಿಯಿಂದ ತೆರವುಗೊಳಿಸಿ, ಮರು ನಿರ್ಮಾಣ ಮಾಡಲಾಗುವುದು. ಶೌಚಾಲಯ, ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ ಸೇರಿದಂತೆ ಕಲಿಕೆಗೆ ಪೂರಕವಾದ ವಾತಾವರಣ ಸೃಷ್ಟಿಸಲು, ಶಿಕ್ಷಣ ಇಲಾಖೆ ಜೊತೆಗೆ ತಾವು ಸದಾಸಿದ್ಧ ಎಂದು ಭರವಸೆ ನೀಡಿದರು.

ಪ್ರತಿಯೊಂದು ಕ್ಷೇತ್ರದ ಅಭಿವೃದ್ಧಿ ವಿಚಾರದಲ್ಲಿ ವಿಜಯಪುರ ನಗರ ಮಾದರಿ ಆಗಿದೆ. ಕೊರೊನಾ ಸಂದರ್ಭದಲ್ಲಿ ಲಸಿಕಾರಣದಲ್ಲಿಯೂ ವಿಜಯಪುರ ನಗರ ನಂಬರ್ ಒನ್ ಸ್ಥಾನದಲ್ಲಿತ್ತು. ರಸ್ತೆಗಳು, ಸ್ಲಂ ಅಭಿವೃದ್ಧಿ, ಬಡವರಿಗೆ ಸ್ವಂತ ಸೂರು ಹೀಗೆ ಎಲ್ಲಾ ರೀತಿಯ ಕೆಲಸಗಳನ್ನು ಮಾಡಿರುವ ತೃಪ್ತಿಯಿದೆ ಎಂದು ಹೇಳಿದರು.

ಮಹಾನಗರ ಪಾಲಿಕೆ ಸದಸ್ಯ ವಿಠ್ಠಲ ಹೊಸಪೇಟ, ಮುಖಂಡರಾದ ರಾಜೇಶ ದೇವಗಿರಿ, ಎಂ.ಎಂ.ಸಜ್ಜನ, ಕ್ಷೇತ್ರ ಶಿಕ್ಷಣಾಧಿಕಾರಿ ಬಸವರಾಜ ತಳವಾರ, ಎಸ್.ಡಿ.ಎಂಸಿ ಅಧ್ಯಕ್ಷ ಗುರಪ್ಪ ಕನ್ನೂರ ಸೇರಿದಂತೆ ಶಾಲೆ ಮುಖ್ಯೋಪಾಧ್ಯಾಯರು, ಶಿಕ್ಷಕರು, ಮಕ್ಕಳು ಮತ್ತಿತರರು ಇದ್ದರು.

# ಆಲಮೇಲ: ವಿವಿಧ ಕಾಮಗಾರಿಗಳಿಗೆ ಶಾಸಕ ಮನಗೂಳಿ ಚಾಲನೆ

**ಉದಯರಶ್ಮಿ ನ್ಯೂಸ್**

ಆಲಮೇಲ: ಕಾಂಗ್ರೆಸ್ ಪಕ್ಷ ಚುನಾವಣೆಯಲ್ಲಿ ಕೊಟ್ಟ ಮಾತಿನಂತೆ ನಡೆದುಕೊಂಡಿದೆ. ಅಧಿಕಾರಕ್ಕೆ ಬಂದು 6 ತಿಂಗಳಲ್ಲಿ 5 ಯೋಜನೆಗಳು ಜಾ-ರಿಗೊಳಿಸಿದೆ. ಅದನ್ನು ಸಹಿಸಿಕೊಳ್ಳದ ವಿರೋದ ಪಕ್ಷದವರು ಲೋಕಸಭೆ ಚುನಾವಣೆ ಬಳಿಕ 5 ಯೋಜನೆಗಳು ವಾರೆಂಟಿ ಆಗಲಿದೆ ಎನ್ನುತ್ತಿದ್ದಾರೆ. ಯಾವುದೆ ಕಾರಣಕ್ಕೂ ಯೋಜನೆಗಳು ನಿಲ್ಲದೇ ಮುಂದುವರೆಯಲಿವೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಬಾನುವಾರ ಪಟ್ಟಣದಲ್ಲಿ 2018-19ನೇ ಸಾಲಿನ ಎಸ್.ಎಫ್.ಸಿ ವಿಶೇಷ ಅನುದಾನದಡಿ ಪಟ್ಟಣದ ದೇವರ ಅಗಸಿ, ದ್ವಾರ ಬಾಗಿಲು ನಿರ್ಮಾಣ ಮತ್ತು ವಿವಿಧ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ನೂತನ ತಾಲೂಕು ಕೇಂದ್ರವಾದ ಆಲಮೇಲ ಪಟ್ಟಣದ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ. ಇದೊಂದು ವಿಶೇಷ ತಾಲೂಕು



ಕೇಂದ್ರವಾಗಿಸುವ ಬಗ್ಗೆ ನನ್ನ ತಂದೆಯವರ ಆಸೆಯಾಗಿತ್ತು. ನನ್ನ ಆಸೆಯೂ ಅದೇ ಆಗಿದೆ ಎಂದರು.

2018-19ನೇ ಸಾಲಿನಲ್ಲಿ ನನ್ನ ತಂದೆ ದಿ. ಎಂ.ಸಿ.ಮನಗೂಳಿ ಅವದಿಯಲ್ಲಿ ಎಸ್.ಎಫ್.ಸಿ ವಿಶೇಷ ಅನುದಾನದಡಿ ಮಂಜರಾಗಿರುವ 5 ಕೋಟಿ ಕಾಮಗಾರಿಗೆ ಇಂದು ನಮ್ಮ ಸರ್ಕಾದಲ್ಲಿ ಅನುದಾನ ಮಂಜುರುಗೊಳಿಸಿ ಕಾಮಗಾರಿಗಳಿಗೆ ಚಾಲನೆ ನೀಡಲಾಗುತ್ತಿದೆ. ಈ ಯೋಜನೆಯಡಿ ಪಟ್ಟಣದ ದೇವರ ಅಗಸಿ ದ್ವಾರ ಬಾಗಿಲು ನಿರ್ಮಾಣಕ್ಕೆ 50 ಲಕ್ಷ ಮಿಸಲಿಡಲಾಗಿತ್ತು. ಬಹುದಿನಗಳಿಂದ ನೆನಗೆಗುದಿಗೆ ಬಿದ್ದಿರುವ ದ್ವಾರ ಬಾಗಿಲು ಕಾಮಗಾರಿ ಆದಷ್ಟು ಬೇಗ ಪೂರ್ಣಗೊಳಿಸಲಾಗುವದು ಎಂದರು.

ಶಾಸಕನಾಗಿ 9 ತಿಂಗಳ ಕಾಲಾವಧಿಯಲ್ಲಿ ಆಲಮೇಲ ಪಟ್ಟಣದ ಅಭಿವೃದ್ದಿಗೆ ರೂ.20 ಕೋಟಿ ಮಂಜುರು ಮಾಡಿಸಲಾಗಿದೆ. ರೂ.20 ಕೋಟಿ ವೆಚ್ಚದಲ್ಲಿ ಇಂಡಿ ರಸ್ತೆ ಪ್ರವಾಸಿ ಮಂದಿರದಿಂದ ಅಫಜಪಲೂರ ರಸ್ತೆಯ ಬಡದಾಳ ಪೆಟ್ರೋಲ ಬಂಕ್‌ವರೆಗೂ ರಸ್ತೆ, ವಿದ್ಯುತ್, ಮೂಲ ಸೌಕರ್ಯ ಅಳವಡಿಸಿ ಸೌಂದರ್ಯೀಕರಣಗೊಳಿಸುವ ಈ ಕಾಮಗಾರಿ ಆದಷ್ಟು ಬೇಗ ಪ್ರಾರಂಭಿಸಲಾಗುವುದು. ಹಾಗೂ ರೂ.3.5 ಕೊಟಿ ವೆಚ್ಚದಲ್ಲಿ ಪಟ್ಟಣದ ಪುರಾತನ ಕೆರೆ ಅಭಿವೃದ್ಧಿಗೆ ಮಿಸಲಿಡಲಾಗಿದೆ. ಈ ಕಾಮಗಾರಿ 15 ದಿನಗಳಲ್ಲಿ ಪ್ರಾರಂಭಿಸುತ್ತೇನೆ ಎಂದು ಹೇಳಿದರು.

ಹಿರೇಮಠದ ಚಂದ್ರಶೇಖರ ಶಿವಾಚಾಯರು, ಅರ್ಬನ ಬ್ಯಾಂಕಿನ ಅಧ್ಯಕ್ಷ ಶಿವುಕುಮಾರ ಗುಂದಗಿ, ಬ್ಲಾಕ್ ಕಾಂಗ್ರೆಸ್ & ಪ.ಪಂ ಸದಸ್ಯ ಅಧ್ಯಕ್ಷ ಸಾಧೀಕ ಸುಂಬಡ ಮಾತನಾಡಿದರು.

ಪ.ಪಂ ಮುಖ್ಯಾಧಿಕಾರಿ ಸುರೇಶ ನಾಯಕ, ಪಿಎಸ್ಐ ಕುಮಾರ ಹಾಡಕರ, ಮುಖಂಡರಾದ ಸೋಮನಾಥ ಮೇಲಿಮನಿ, ಸೌಕತಲಿ ಸುಂಬಡ, ಅಶೋಕ ಕೊಳಾರಿ, ಮಲ್ಲು ಅಚಲೇರಿ, ಸಂತೋಷ ಜರಕರ, ಬೀಮ ಬಮ್ಮನಳ್ಳಿ, ಶಶಿಧರ ಗಣಿಯಾರ, ದಯಾನಂದ ನಾರಾಯಣಕರ, ಮೈಬೂಬ ಮಸಳಿ, ಪ್ರಶಾಂತ ನಾಶಿ ಮುಂತಾದವರು ಇದ್ದರು.

# ಪ್ರಜಾಪ್ರಭುತ್ವದ ಹಬ್ಬದಲ್ಲಿ ಭಾಗಿಯಾಗೋಣ :ಬಾಗಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ನೆಹರು ಯುವ ಕೇಂದ್ರ, ಜಿಲ್ಲಾ ಆಡಳಿತ ಜಿಲ್ಲಾ ಪಂಚಾಯತ್ ಹಾಗೂ ಸಖಿ ಮಹಿಳಾ ಸೇವಾ ಸಮಿತಿ ವತಿಯಿಂದ ಆಯೋಜಿಸಲಾದ ಮತದಾನ ಜಾಗತಿಕ ಹಾಗೂ ನೋಂದಣಿ ಕಾರ್ಯಕ್ರಮ ಮತ್ತು ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಸೋಮವಾರ ಶ್ರೀಮತಿ ಕುಮುದುಬಿನ್ ದರ್ಬಾರ್ ಕಾಲೇಜಿನಲ್ಲಿ ಎಲ್ಲ ಯುವ ಮಿತ್ರರೊಂದಿಗೆ ಸಂವಾದ ಕಾರ್ಯಕ್ರಮ ಜರುಗಿತು.




ಈ ಕಾರ್ಯಕ್ರಮದಲ್ಲಿ ಸಖಿ ಸಂಸ್ಥೆಯ ಅದ್ಯಕ್ಷೆ ಪೂಜಾ ಬಾಗಿ ಮಾತನಾಡಿ, ಮತದಾನ ನಮ್ಮ ಹಕ್ಕು ಮತದಾನ ಮಾಡಿ ಪ್ರಜಾಪ್ರಭುತ್ವದ ಹಬ್ಬದಲ್ಲಿ ಎಲ್ಲರು ಬಾಗಿಯಾಗೋಣ, ಯುವ ಸಮೂಹ ದೇಶದ ಬದಲಾವಣೆಯಲ್ಲಿ ಬಹುಮುಖ್ಯ ಪಾತ್ರ ವಹಿಸುತ್ತದೆ ಎಂದು ಹೇಳಿದರು.

ಮಹಾವಿದ್ಯಾಲಯದ ಪ್ರಾಂಶುಪಾಲ ಗ್ರಾಮ ಪುರೋಹಿತ್ & ಬಂದೆನವಾಜ ಕುರುಬು ಸರ್ ಅವರು ಅತಿಥಿ ಉಪನ್ಯಾಸ ಮಾಡಿದರು.

ರಾಮಚಂದ್ರ ಚವ್ಹಾಣ ಪಾಲ್ಗೊಂಡಿದ್ದರು.

# ರೈತಸಂಘ ನಗರ ಅಧ್ಯಕ್ಷರಾಗಿ ಚಲವಾದಿ ಆಯ್ಕೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ವಿಜಯಪುರ ನಗರ ಘಟಕದ ಅಧ್ಯಕ್ಷರಾಗಿ ಸಂಗಪ್ಪ ಚಲವಾದಿ ಅವರಿಗೆ ಜಿಲ್ಲಾ ಕೇಂದ್ರ ಕಚೇರಿಯಲ್ಲಿ ಸಂಘದ ಗುರಿ ಹಾಗೂ ತತ್ವ ಸಿದ್ಧಾಂತಗಳನ್ನು ಹೇಳಿ ಜಿಲ್ಲಾಧ್ಯಕ್ಷ ಸಂಗಮೇಶ ಸಗರ ಅವರು ಆದೇಶ ಪ್ರತಿ ನೀಡಿದರು.

ಬಳಿಕ ಮಾತನಾಡಿದ ಅವರು, ವಿಜಯಪುರ ನಗರದಲ್ಲಿ ಬರುವ ಎಲ್ಲಾ ವಾರ್ಡಗಳಲ್ಲಿ ರೈತ ಸಂಘದ ಹಿರಿಯ, ಯುವ, ಮಹಿಳಾ, ಕಾರ್ಮಿಕ ಸಂಘಟನೆಯನ್ನು ಮಾಡಿ ಎಲ್ಲಾ ರೈತರನ್ನು ಸಂಘಟನೆಗೆ ಕರೆತಂದು ಸರ್ಕಾರದ ಯೋಜನೆಗಳನ್ನು ತಿಳಿಸುತ್ತಾ, ಹೊಸ ಹೊಸ ತಂತ್ರಜ್ಞಾನಗಳನ್ನು ತಿಳಿಸುತ್ತಾ ಸಮಗ್ರ ಹಾಗೂ ಸಾವಯುವ ಕೃಷಿ ಮಾಡುವಂತೆ ಪ್ರೇರೇಪಿಸಿ ರೈತರ ಆದಾಯವನ್ನು ದ್ವಿಗುಣಗೊಂಡು ಯಾರು ಆತ್ಮಹತ್ಯೆ ಮಾಡಿಕೊಳ್ಳದಂತೆ ನಾವೆಲ್ಲರೂ ರೈತರ ಪರವಾಗಿ ಶ್ರಮಿಸೋಣ ಎಂದರು.

ಈ ವೇಳೆ ಜಿಲ್ಲಾ ಸಂಚಾಲಕ ರಾಮನಗೌಡ ಪಾಟೀಲ (ಬ್ಯಾಲ್ಯಾಳ), ನಿಡಗುಂದಿ ಅಧ್ಯಕ್ಷ ಡಾ. ಎಂ.ಕೆ.ಬಿರಾದಾರ ಮುಖಂಡರಾದ ಹಾಜಿಲಾಲ ಕರ್ಜಗಿ ಸೇರಿದಂತೆ ಇತರರು ಇದ್ದರು.

# ಛಲ-ಗುರಿ ಇದ್ದಾಗ ಮಾತ್ರ ಸಾಧನೆ ಸಾಧ್ಯ



**ಉದಯರಶ್ಮಿ ನ್ಯೂಸ್**

ವಿಜಯಪುರ: ಸಾಧಿಸಬೇಕೆಂಬ ಛಲ ಹಾಗೂ ಗುರಿ ಇದ್ದಾಗ ಮಾತ್ರ ಜೀವನದಲ್ಲಿ ಸಾಧಿಸಲು ಸಾಧ್ಯ ಎಂದು ಪಿ.ಎಸ್.ಐ ಸರಸ್ವತಿ ಪರಸಪ್ಪನವರ ಹೇಳಿದರು.

ರವಿವಾರ ಬೆಳಿಗ್ಗೆ ಗಣೇಶ ನಗರದ ಶ್ರೀ ಲಕ್ಷ್ಮೀ ದೇವಸ್ಥಾನದಲ್ಲಿ ಶ್ರೀ ಪಾವನಗಂಗಾ ಮಹಿಳಾ ಸ್ವಸಹಾಯ ಸಂಘ ಹಾಗೂ ಸತ್ಯವತಿ ಮೀನುಗಾರ ಮಹಿಳಾ ಸಂಘ ವಿಜಯಪುರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ಅಂತರಾಷ್ಟ್ರಾಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಂದೆ-ತಾಯಂದಿರಿಗೆ ಗಂಡು ಹಾಗೂ ಹೆಣ್ಣು ಎಂಬ ಮನೋಬಾವ ಇರಬಾರದು. ಗಂಡು ಮಗುವಿಗೆ ಎಷ್ಟು ಪ್ರೋತ್ಸಾಹ ನೀಡುತ್ತೇವೆ ಅಷ್ಟೆ ಹೆಣ್ಣು ಮಕ್ಕಳಿಗೆ ನೀಡಬೇಕು. ಅವರಲ್ಲಿಯೂ ಕೂಡ ಹಲವಾರು ಗುರಿಗಳು ಇರುತ್ತವೆ, ಮುಕ್ತ ಮನಸ್ಸಿನಿಂದ ನಮ್ಮಲ್ಲಿ ಹಂಚಿಕೊಳ್ಳದೆ ಇರಬಹುದು, ಆದರೆ ಅವರಿಗೂ ಸ್ವತಂತ್ರವಾಗಿ ಬೆಳೆಯಬೇಕು ಮುಂದುವರೆಯಬೇಕು ಸಾಧಿಸಬೇಕು ಎಂಬ ಬಾವನೆ ಇದ್ದೇ ಇರುತ್ತದೆ. ಅವುಗಳನ್ನು ಅರಿತು ನಾವು ಹೆಣ್ಣು ಮಕ್ಕಳಿಗೂ ಪ್ರೋತ್ಸಾಹಿಸಬೇಕು. ಸಮಾಜದಲ್ಲಿ ಅವರಿಗೂ ಗೌರವ ಸ್ಥಾನಮಾನ ಹೊಂದುವಂತೆ ಪ್ರೇರೆಪಿಸಬೇಕು ಎಂದು ಹೇಳಿದರು.

ಅಲ್ಪಸಂಖ್ಯಾತರ ಬಾಲಕಿಯ ವಸತಿ ಶಾಲೆಯ ಪ್ರಾಂಶುಪಾಲೆ ಕು. ರೇಖಾ ಎನ್ ಬಾರ್ಕಿ ಮುಖ್ಯ ಅತಿಥಿಗಳಾಗಿ ಮಾತನಾಡಿ, ಪ್ರತಿಯೊಬ್ಬ ಹೆಣ್ಣು ಮಕ್ಕಳು ಛಲ ಹಾಗೂ ಗುರಿಯನ್ನು ಹೊಂದಿರಬೇಕು. ನಾವು ಏನಾದರೂ ಸಾಧಿಸಬೇಕೆಂದರೆ ಹಲವಾರು ಅಡ್ಡಿ ಆತಂಕಗಳು ಬರುತ್ತವೆ ಆದರೂ ದಿಟ್ಟತನದಿಂದ ಸಾಧಿಸಬೇಕೆಂಬ ಛಲ ನಮ್ಮಲ್ಲಿ ಇರಬೇಕು. ಇದರ ಜೊತೆಗೆ ನಮ್ಮ ಕುಟುಂಬದವರ ನಮ್ಮ ಸಾಧನೆಗೆ ಸದಾ ಪ್ರೋತ್ಸಾಹ ನೀಡಬೇಕು ಎಂದು ಅವರು ಹೇಳಿದರು.

ಇನ್ನೋರ್ವ ಅತಿಥಿ ಶಿಲ್ಪಾ ಕುದುರಗೊಂಡ ಮಾತನಾಡಿದರು.

ಕಾರ್ಯಕ್ರಮಕದಲ್ಲಿ ಕಮಲಾಬಾಯಿ ಪಿರಾಪೂರ, ಯು ಜೆ ಎಮ್ ಪಿ. ವಿಕಾಸ ಶಾಲೆ ಪ್ರಾಂಶುಪಾಲರಾದ ಮಂಜುಳಾ ಎಚ್ ತನಶ್ಯಾಳ, ನೀಲಮ್ಮ ಯಡ್ರಾವಿ, ವಿಮಲಾ ಓತಿಹಾಳ, ಶಾಂತಾಬಾಯಿ ನಾಟೀಕರ, ಮೀನಾಕ್ಷಿ ದೊಡವಾಡ, ಪಾರ್ವತಿ ಚಿಗರಿ. ಮಂಜುಳಾ ಹಿಪ್ಪರಗಿ. ಶ್ರೀ ಪಾವನಗಂಗಾ ಮಹಿಳಾ ಸ್ವಸಹಾಯ ಸಂಘ ಅಧ್ಯಕ್ಷೆ ದಾನಮ್ಮ ಕೋಳಿ, ಶ್ರೀಮತಿ ಗಂಗೂಬಾಯಿ ದುಮಾಳ, ರೂಪ ಜಂಬೆರಾಳ, ಪೂಜಾ ಕೋಳಿ, ಕವಿತಾ ತಳವಾರ, ರೇಣುಕಾ ತಳವಾರ, ವಿಜಯಲಕ್ಷ್ಮಿ ತಳವಾರ, ಉಷಾ ಅಂಬಿಗೇರ ಇಂದ್ರಾಬಾಯಿ. ವಾಲಿಕಾರ, ಪಾವನಗಂಗಾ ಮಹಿಳಾ ಸ್ವಸಹಾಯ ಸಂಘ ಹಾಗೂ ಸತ್ಯವತಿ ಮೀನುಗಾರ ಮಹಿಳಾ ಸಂಘದ ಸದಸ್ಯರು ಹಾಗೂ ಇತರರು ಉಪಸ್ಥಿತರಿದ್ದರು.

ದೀಪಾ ಬಿರಾದಾರ ಸ್ವಾಗತಿಸಿದರು, ಸರಳಾ ಕೋಳಿ ವಂದಿಸಿದರು.

## ಕಲಬುರ್ಗಿ ಫೌಂಡೇಶನ್ ಕೊಡಮಾಡುವ 2024 ನೆ ಸಾಲಿನ 'ಸಾಹಿತ್ಯ ಸಿರಿ & ವಚನ ಸಿರಿ' ಪ್ರಶಸ್ತಿ ಪ್ರದಾನ

# ವೈಚಾರಿಕ ಪ್ರಜ್ಞೆ ಬೆಳೆಸುವ ವಚನ ಸಾಹಿತ್ಯ :ಡಾ.ಮದಭಾವಿ

**ಉದಯರಶ್ಮಿ ನ್ಯೂಸ್**

ವಿಜಯಪುರ: "ಸಾಹಿತ್ಯದ ಓದು ಮನುಷ್ಯ ಪ್ರಜ್ಞೆಯನ್ನು ಜಾಗ್ರತ ಗೊಳಿಸಿದರೆ ಕನ್ನಡ ನಾಡಿನ ಶಿವಶರಣರ ವಚನಗಳು ವೈಚಾರಿಕ ಪ್ರಜ್ಞೆಯನ್ನು ಬೆಳೆಸುವವು" ಎಂದು ಫ ಗು ಹಳಕಟ್ಟಿ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ. ಎಂ ಎಸ್ ಮದಭಾವಿ ಹೇಳಿದರು.



ಕಲಬುರ್ಗಿ ಫೌಂಡೇಶನ್ ಕೊಡಮಾಡುವ 2024 ನೆಯ ಸಾಲಿನ ' ಸಾಹಿತ್ಯ ಸಿರಿ ' ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಅವರು, "ಡಾ. ಎಂ ಎಂ ಕಲಬುರ್ಗಿ ಅವರು ಭಾರತದ ಶ್ರೇಷ್ಠ ಸಂಶೋಧಕರಲ್ಲಿ ಒಬ್ಬರು. ಅವರ ಸಂಶೋಧನಾ ಸಂಪುಟಗಳು ಓದುಗರಲ್ಲಿ ವೈಚಾರಿಕ ಪ್ರಜ್ಞೆಯನ್ನು ಬಿತ್ತಿ ಬೆಳೆಯುತ್ತವೆ. ಸಂಶೋಧಕ ತಪ್ಪಾಗಿ ಹೇಳಿರಬಹುದು, ಸುಳ್ಳು ಹೇಳಲಾರ' ಎಂದು ಹೇಳಿದ ಕಲಬುರ್ಗಿ ಅವರ ಮಾತುಗಳೂ ಕೂಡಾ ಯುವ ಸಂಶೋಧಕರಿಗೆ ಮಾರ್ಗದರ್ಶನವಾಗಿವೆ. ವಿಜಯಪುರ ಫ ಗು ಹಳಕಟ್ಟಿ ಸಂಶೋಧನಾ ಕೇಂದ್ರವನ್ನು ರಾಷ್ಟ್ರ ಮಟ್ಟಕ್ಕೆ ತೆಗೆದುಕೊಂಡು ಹೋಗುವಲ್ಲಿ ಕಲಬುರ್ಗಿ ಅವರ ಪಾತ್ರ ಹಿರಿದಾಗಿದೆ. ನಮ್ಮ ಸಂಶೋಧನಾ ಕೇಂದ್ರಕ್ಕೆ ಹೊಸ ಹೊಸ ಯೋಜನೆಗಳನ್ನು ರೂಪಿಸಿಕೊಟ್ಟು ಅದಕ್ಕೆ ಸಂಬಂಧಿಸಿದ ಆಕರಗಳನ್ನು ಒದಗಿಸಿ ಸಂಶೋಧನಾ ವಿದ್ಯಾರ್ಥಿಗಳಿಗೆ ಸ್ಫೂರ್ತಿ ಹಾಗೂ ಪ್ರೇರಣೆ ನೀಡುತ್ತಿದ್ದರು. ಅವರ ಸಾಹಿತ್ಯದ ಸೇವೆಯನ್ನು ಕನ್ನಡಿಗರು ಹೆಮ್ಮೆಯಿಂದ ಸ್ಮರಿಸಿಕೊಳ್ಳಲೇಬೇಕು. ಕಲಬುರ್ಗಿ ಅವರ ಹೆಸರಿನ ಈ ಪ್ರಶಸ್ತಿ ನನ್ನ ಸಾಹಿತ್ಯದ ಪರಿಚಾರಿಕೆಗೆ ಇನ್ನಷ್ಟು ಪುಷ್ಟಿ ನೀಡಿದೆ " ಎಂದರು

ಇದೆ ಸಂದರ್ಭದಲ್ಲಿ ' ವಚನ ಸಿರಿ' ಪ್ರಶಸ್ತಿ ಯನ್ನು ಸ್ವೀಕರಿಸಿ ಮಾತನಾಡಿದ ಕಲಬುರ್ಗಿಯ ವಿಶ್ರಾಂತ ಪ್ರಾಧ್ಯಾಪಕಿ ಡಾ.ಮೀನಾಕ್ಷಿ ಬಾಳಿ ಅವರು, ಡಾ. ಎಂ ಎಂ ಕಲಬುರ್ಗಿ ಹಂತಕರ ಗುಂಡಿಗೆ ಬಲಿಯಾದದ್ದು ಈ ನಾಡಿನವರ ದುರ್ದೈವ, ಕಲಬುರ್ಗಿಯವರು ತಾವು ಸಂಶೋಧ'ನೆಯಲ್ಲಿ ತಲ್ಲೀನರಾಗುವುದಲ್ಲದೆ ತಮ್ಮ ವಿದ್ಯಾರ್ಥಿಗಳನ್ನು ಸಂಶೋಧನಾ ಕ್ಷೇತ್ರದಲ್ಲಿ ದುಡಿಸಿ, ಕನ್ನಡ ಸಾಹಿತ್ಯದ ಕಸುವನ್ನು ಹೆಚ್ಚಿಸಿದರು ಎಂದರು.

ಸಂಶೋಧ'ನಾ ಕ್ಷೇತ್ರದ ಅನರ್ಘ್ಯ ರತ್ನ ವಾಗಿದ್ದ ಡಾ. ಎಂ ಎಂ ಕಲಬುರ್ಗಿ ಅವರು ವಚನ ಸಾಹಿತ್ಯದ ಕುರಿತಾಗಿ ತೆಗೆದುಕೊಂಡ ನಿರ್ಣಯಗಳು ಸಾರ್ವಕಾಲಿಕವಾಗಿವೆ ಎಂದು 'ವಚನ ಸಿರಿ' ಪ್ರಶಸ್ತಿಯನ್ನು ಸ್ವೀಕರಿಸಿದ ಇನ್ನೊರ್ವ ಅಧುನಿಕ ವಚನಕಾರ್ತಿಯಾದ ಬಾಗಲಕೋಟೆಯ ಶ್ರೀಮತಿ ಗೌರಮ್ಮ ನಾಶಿ ಹೇಳಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಸಿಂದಗಿಯ ಜಾನಪದ ವಿದ್ವಾಂಸ ಡಾ. ಎಂ ಎಂ ಪಡಶೆಟ್ಟಿ ಅವರು, ಕಲಬುರ್ಗಿ ಕುಟುಂಬದವರು ಹುಟ್ಟು ಹಾಕಿದ ಕಲಬುರ್ಗಿ ಫೌಂಡೇಶನ್ ಪ್ರತಿ ವರ್ಷವೂ ಸಾಹಿತ್ಯ ಸಿರಿ ಹಾಗೂ ವಚನ ಸಿರಿ ಪ್ರಶಸ್ತಿಯನ್ನು ನೀಡುವ ಮೂಲಕ ಡಾ. ಎಂ ಎಂ ಕಲಬುರ್ಗಿ ಅವರ ಚಿಂತನೆಗಳನ್ನು ಜೋಪಾನವಾಗಿ ಕಾಪಿಡುವ ಕೆಲಸ ಮಾಡುತ್ತಿದೆ" ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಪುಣೆಯ ಬಸವ ತಿಳುವಳಿಕೆ ಮತ್ತು ಸಂಶೋಧನ ಕೇಂದ್ರದ ಅಧ್ಯಕ್ಷ ಡಾ. ಶಶಿಕಾಂತ ಪಟ್ಟಣ ಅವರು ಮಾತನಾಡಿ, ವಚನಗಳ ಓದು ನಮ್ಮೊಳಗೆ ಹೊಸ ಸಂಚಲನ ಸೃಷ್ಟಿಸಿವೆ. ನಿತ್ಯದ ಹಲವು ಬಿಕ್ಕಟ್ಟುಗಳಿಗೆ ಶರಣ ವಚನಗಳಲ್ಲಿ ಪರಿಹಾರವಿದೆ. ಅದನ್ನು ಹುಡುಕಬೇಕಷ್ಟೇ ಹಾಗೂ ವಚನಗಳನ್ನು ಪರಿಷ್ಕರಣೆ ಮಾಡುವ ಜರೂರು ಇದೆ ಎಂದರು.

ಸಾಹಿತಿ ಮನು ಪತ್ತಾರ ಕಲಕೇರಿ ಪ್ರಶಸ್ತಿ ಪುರಸ್ಕೃತರ ಕುರಿತು ಅಭಿನಂದನಾ ನುಡಿಗಳನ್ನಾಡಿದರು.

ನ್ಯೂಜಿಲೆಂಡನ ಬಸವ ಸಮಿತಿ ಸಂಸ್ಥಾಪಕ ಲಿಂಗಣ್ಣ ಕಲಬುರ್ಗಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು

ಕಾರ್ಯಕ್ರಮದಲ್ಲಿ ಸಿದ್ರಾಮಪ್ಪ ಉಪ್ಪಿನ, ಬಿ.ಸಿ.ಉಪ್ಪಿನ, ವಿ.ಸಿ.ನಾಗಠಾಣ, ಡಾ.ಆರ್ . ಕೆ.ಕುಲಕರ್ಣಿ, ಮಲ್ಲಿಕಾರ್ಜುನ ಯಂಡಿಗೇರಿ, ಡಾ.ವಿ.ಡಿ.ಐಹೊಳ್ಳಿ, ಡಾ. ಸೋಮಶೇಖರ್ ವಾಲಿ, ಬಿ.ಎಚ್ . ಹಿರೇಮಠ, ವಿ.ವಿ. ಹಿರೇಮಠ, ಡಾ. ಎಂ ಎಸ್ ಚಾಂದಕವಠೆ, ಎಸ್ ಬಿ ದೊಡಮನಿ, ಎ.ಬಿ. ಬೂದಿಹಾಳ, ಎಂ ಎಲ್ ಮದಭಾವಿ, ಅಕ್ಕಮಹಾದೇವಿ ಬಾರ್ಲಿ, ಶೈಲಜಾ ಇಜೇರಿ, ಉಷಾ ಹಿರೇಮಠ, ಶಾರದಾ ಕೊಪ್ಪ, ರಾಜಶೇಖರ್ ಉಮರಾಣಿ, ಶಿವಪ್ಪಣ್ಣ ಗವಸಾನಿ, ಗೀತಯೋಗಿ, ಅಕ್ಕನ ಅರಿವಿನ ಹಲವಾರು ಮಹಿಳಾ ಸದಸ್ಯರು ಉಪಸ್ಥಿತರಿದ್ದರು

ಬಿ.ಆರ್.ಬನಸೋಡೆ ಪ್ರಾರ್ಥಿಸಿದರು ಚಿದಂಬರ ಬಂಡಗಾರ ನಿರೂಪಿಸಿದರು. ಸುಭಾಸಚಂದ್ರ ಕನ್ನೂರ, ಈರಣ್ಣ ತೊಂಡಿಕಟ್ಟಿ ನಿರ್ವಹಿಸಿದರು. ಕಲಬುರ್ಗಿ ಫೌಂಡೇಶನ್ ಅಧ್ಯಕ್ಷ ಶಿವಲಿಂಗಪ್ಪ ಕಲಬುರ್ಗಿ ವಂದಿಸಿದರು.

# ಸೌಹಾರ್ದ ಬ್ಯಾಂಕ್ ಕಳ್ಳತನ: ಆರು ಆರೋಪಿಗಳ ಬಂಧನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಚಡಚಣ ತಾಲೂಕಿನ ಧೂಳಖೇಡ ಗ್ರಾಮದ ಶ್ರೀ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆ ಸೌಹಾರ್ದ ಬ್ಯಾಂಕಿನಲ್ಲಿ ನಡೆದ ಕಳ್ಳತನ ಪ್ರಕರಣವನ್ನು ಝಳಕಿ ಪೊಲೀಸರು ಭೇದಿಸಿದ್ದು, ಆರು ಜನ ಆರೋಪಿಗಳನ್ನು ಬಂಧಿಸಿದ್ದಾರೆ.

ಈ ಕುರಿತು ಝಳಕಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಎಸ್ಪಿ ಋಷಿಕೇಶ ಸೋನಾವಣೆ, ಫೆ. 28 ರಂದು ಮಧ್ಯರಾತ್ರಿ ಸೌಹಾರ್ದ ಬ್ಯಾಂಕ್ ನಲ್ಲಿದ್ದ ರೂ. 19.45 ಲಕ್ಷ ಹಣವನ್ನು ಕಳ್ಳತನ ಮಾಡಲಾಗಿ-ತ್ತು. ಈ ಪ್ರಕರಣ ಸಂಬಂಧ ತನಿಖೆ ನಡೆಸಿದ ಝಳಕಿ ಪೊಲೀಸರು 6 ಜನ ಆರೋಪಿಗಳನ್ನು ಕಳುವಾದ ಹಣ, ಕಳ್ಳತನ ಮಾಡಲು ಬಳಸಿದ ವಾಹನಗಳು



ಹಾಗೂ ಮೊಬೈಲ್ ಗಳು ಸೇರಿದಂತೆ ಒಟ್ಟು ರೂ. 27.15 ಲಕ್ಷ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಂಡಿದ್ದಾರೆ.

ಈ ಸಂಬಂಧ ಮಹಾರಾಷ್ಟ್ರದ ಸೋಲಾಪುರ ತಾಲೂಕಿನ ಕುರಗೋಟ ಗ್ರಾಮದ ಮಲ್ಲಿಕಾರ್ಜುನ ಮುಕಿಂ-ದ ಹೊನಮಾನೆ(29), ಲತೀಫ್ ಲಾಲಸಾಬ ಮಕಾನದಾರ(27), ಮಾಳಪ್ಪ ಗಂಗಾಧರ ಸಲಗರೆ(24), ಬಾಗಲಕೋಟೆಯ ನವನಗರದ ನಿತೇಶ ಸದಾನಂದ ನೀಲವಣಿ(23), ಹುಲಗಪ್ಪ ರಂಗಪ್ಪ ಪಾತ್ರೋಟ(26), ಅಬ್ದುಲ್ ಮೈನುದ್ದೀನ್ ಚೀನಿ(27) ಎಂಬುವರನ್ನು ಬಂಧಿಸಿದ್ದಾರೆ.

ಈ ಆರೋಪಿಗಳ ವಿರುದ್ಧ ಬಾಗಲಕೋಟೆ, ಗದಗ, ಕೊಪ್ಪಳ, ಬೆಳಗಾವಿ ಜಿಲ್ಲೆಗಳಲ್ಲಿಯೂ ಕಳ್ಳತನ ಪ್ರಕರಣಗಳು ದಾಖಲಾಗಿವೆ.

ಈ ಕಾರ್ಯಾಚರಣೆಯಲ್ಲಿ ವಿಜಯಪುರ ಹೆಚ್ಚುವರಿ ಎಸ್ಪಿ ಶಂಕರ ಮಾರಿಹಾಳ, ಚಡಚಣ ಸಿಪಿಐ ಎಚ್. ಡಿ. ಮುಲ್ಲಾ, ಪಿಎ□□□ ರಾಘವೇಂದ್ರ ಖೋತ, ಹೊನ್ನಪ್ಪ ತಳವಾರ ಮತ್ತು ಸಿಬ್ಬಂದಿ ಪಾಲ್ಗೊಂಡು ಉತ್ತಮ ಕೆಲಸ ಮಾಡಿದ್ದಾರೆ ಎಂದು ವಿಜಯಪುರ ಎಸ್ಪಿ ಋಷಿಕೇಶ ಸೋನಾವಣೆ ತಿಳಿಸಿದ್ದಾರೆ.

# ಎಸ್.ಟಿ.ಮೋರ್ಚಾ ಅಧ್ಯಕ್ಷರಾಗಿ ಕದ್ದರಕಿ ಆಯ್ಕೆ

**ಉದಯರಶ್ಮಿ ನ್ಯೂಸ್**

ಸಿಂದಗಿ: ಬಿಜೆಪಿ ಪಕ್ಷದ ಯುವ ಮುಖಂಡ ಪ್ರಶಾಂತ ಕದ್ದರಕಿಯವರನ್ನು ಎಸ್.ಟಿ. ಮೋರ್ಚಾ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿ ತಾಲೂಕು ಮಂಡಲ ಅಧ್ಯಕ್ಷ ಸಂತೋಷ ಪಾಟೀಲ ಡಂಬಳ ಆದೇಶ ಹೊರಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಎಸ್.ಟಿ.ಮೋರ್ಚಾ ಅಧ್ಯಕ್ಷ ಪ್ರಶಾಂತ ಕದ್ದರಕಿ, ಪಕ್ಷದ ಹಿರಿಯರು ನನ್ನ ರಾಜ-ಕೀಯ ಗುರು ಮಾಜಿ ಶಾಸಕ ರಮೇಶ ಭೂಸನೂರ ಮತ್ತು ಜಿಲ್ಲಾಧ್ಯಕ್ಷರು, ತಾಲೂಕು ಅಧ್ಯಕ್ಷರು ನನ್ನ ಮೇಲೆ ಭರವಸೆಯಿಟ್ಟು ಎಸ್.ಟಿ.ಮೋರ್ಚಾ ಅಧ್ಯಕ್ಷ ಸ್ಥಾನವನ್ನು ನೀಡಿದ್ದಾರೆ. ನನ್ನ ಮೇಲೆ ಇಟ್ಟಿರುವ ಭರವಸೆ ಹುಸಿಯಾಗದಂತೆ ಪಕ್ಷದಲ್ಲಿ ಪ್ರಾಮಾಣಿಕವಾಗಿ ಕಾರ್ಯ ನಿರ್ವಹಿಸುತ್ತೇನೆ ಮುಂಬರು ಲೋಕಸಭೆ, ಜಿ.ಪಂ, ತಾ.ಪಂ ಚುನಾವಣೆಗಳಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸುವೆ ಪಕ್ಷವನ್ನು ಸಂಘಟಿಸುವೆ ಎಂದು ಹೇಳಿದರು.



# ಕಾಶಿಬಾಯಿ ರಾಂಪೂರಗೆ ಪ್ರಶಸ್ತಿ ಪ್ರದಾನ

**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ವಿಜಯಪುರ ಜಿಲ್ಲೆಯ ಮಲಘಾಣ ಗ್ರಾಮದ ಇಂಚಗೇರಿ ಆದ-್ಯಾತ್ಮ ಸಂಪ್ರದಾಯ ಫೌಂಡೇಶನ ವತಿಯಿಂದ ಮಹಾಶಿವರಾತ್ರಿ ಹಾಗೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಯುಕ್ತ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕಿಯರಿಗೆ ಪ್ರತಿ ವರ್ಷ ನೀಡುವ ಅಹಿಲ್ಯಾಬಾಯಿ ಹೋಳ್ಕರ ರಾಷ್ಟ್ರೀಯ ಪ್ರಶಸ್ತಿಗೆ ಸಮಾಜ ಸೇವಕಿ ಕಾಶಿಬಾಯಿ ರಾಂಪೂರ ಭಾಜನರಾಗಿ ಪ್ರಶಸ್ತಿ ಸ್ವೀಕ-ರಿಸಿದರು.



# ವಿಶ್ವದಾಖಲೆ ಮಟ್ಟದ ಸ್ವಾಸ್ಥ್ಯ ಸಂತುಲನ ರಂಗೋಲಿ ಮಹೋತ್ಸವಕ್ಕೆ ಚಾಲನೆ

**ಉದಯರಶ್ಮಿ ನ್ಯೂಸ್**



ವಿಜಯಪುರ: ರಂಗೋಲಿಯ ಮೂಲಕ ಆರೋಗ್ಯದ ಕುರಿತು ಜಾಗೃತಿ ಮೂಡಿಸುವ ಮತ್ತು ಜಗತ್ತಿನ ನಾನಾ ದಾಖಲೆ ಪುಟಗಳಲ್ಲಿ ಸೇರಿಸುವ ವಿಶ್ವದ ಮೊದಲ ವಿನೂತನ ಕಾರ್ಯಕ್ರಮಕ್ಕೆ ಬಸವ ನಾಡು ವಿಜಯಪುರದಲ್ಲಿ ನಡೆದಿದ್ದು, ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಚಾಲನೆ ನೀಡಿದ್ದಾರೆ.

ವಿಜಯಪುರ ನಗರದ ಪ್ರತಿಷ್ಠಿತ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜು, ಆಸ್ಪತ್ರೆ ಮತ್ತು ಸಂಶೋಧನೆ ಕೇಂದ್ರದ 1500 ವಿದ್ಯಾರ್ಥಿಗಳು ಸ್ವಾಸ್ಥ ಸಂತುಲನ ರಂಗೋಲಿ ಮಹೋತ್ಸವದಲ್ಲಿ ಪಾಲ್ಗೊಂಡು ವೈದ್ಯಕೀಯ ಶಿಕ್ಷಣ ಕ್ಷೇತ್ರಕ್ಕೆ ಸಂಬಂಧಿಸಿದ 250 ರಂಗೋಲಿ ಚಿತ್ರಗಳನ್ನು ಬಿಡಿಸಿ ಗಮನ ಸೆಳೆದರು. ತಲಾ ಐದಾರು ವೈದ್ಯಕೀಯ ವಿದ್ಯಾರ್ಥಿಗಳು ತಂಡದ ರೂಪದಲ್ಲಿ ತಮ್ಮ ವೈದ್ಯಕೀಯ ಪಠ್ಯಕ್ರಮಕ್ಕೆ ಸಂಬಂಧಿಸಿದ ರಂಗೋಲಿ ಚಿತ್ರಗಳನ್ನು ಬಿಡಿಸಿದರು. ಬಿ.ಎಲ್.ಡಿ.ಇ ವಿವಿಯ 24 ವಿಭಾಗಗಳ ವಿದ್ಯಾರ್ಥಿಗಳಿಗೆ ಕಾಲೇಜಿನ ಶಿಕ್ಷಕರು, 40 ಜನ ಮಾರ್ಗದರ್ಶಕರು ಮತ್ತು 20 ಜನ ಮೇಲ್ವಿಚಾರಕರು ಬನ್ನೆಲುಬಾಗಿ ನಿಂತಿದ್ದರು. ಒಟ್ಟು 50 ಸಾವಿರ ಚದುರ ಅಡಿ ಪ್ರದೇಶದಲ್ಲಿ 10 ಟನ್ ರಂಗೋಲಿ ಬಳಕೆಯಾಗುತ್ತಿದೆ. 10 ಅಡಿ ಉದ್ದ, 12 ಅಡಿ ಅಗಲ ಅಳತೆಯ 250 ರಂಗೋಲಿ ಚಿತ್ರಗಳನ್ನು ಬಿಡಿಸಲಾಯಿತು.

ಮಾನವನ ಶರೀರ, ಅಂಗಾಂಗಗಳು, ಕಾಯಿಲೆಗಳು, ಗುಣಲಕ್ಷಣಗಳು, ದುಶ್ಚಟಗಳ ಪರಿಣಾಮಗಳು, ಔಷಧೋಪಚಾರಗಳು, ಮುನ್ನೆಚ್ಚರಿಕೆ ಕ್ರಮಗಳು, ರೋಗಗಳ ನಿಯಂತ್ರಣ, ವ್ಯಾಯಾಮ, ಆಹಾರ ನಿಯಮಿತ ಸೇವನೆ, ಆರೋಗ್ಯದ ತುರ್ತು ಸಂದರ್ಭಗಳಲ್ಲಿ ಕೈಗೊಳ್ಳಬಹುದಾದ ಪ್ರಾಥಮಿಕ ಚಿಕಿತ್ಸೆಗಳು, ಅತ್ಯಾಧುನಿಕ ವೈದ್ಯಕೀಯ ಚಿಕಿತ್ಸೆಗಳು ಸೇರಿದಂತೆ ಮನೋಸ್ಥೈರ್ಯ ಹೆಚ್ಚಳ, ಸ್ವಚ್ಛ ಪರಿಸರ, ಪ್ರಕೃತಿಯ ಸಂರಕ್ಷಣೆ, ಧ್ಯಾನ ಹೀಗೆ ಹಲವಾರು ವಿಷಯಗಳನ್ನು ರಂಗೋಲಿಯ ಮೂಲಕ ಚಿತ್ರಿಸಲಾಗಿತ್ತು.

ಕೈಯ್ಯಲ್ಲಿ ಪೆನ್ನು, ಕತ್ತಿನಲ್ಲಿ ಸ್ಟೆಥೋಸ್ಕೋಪ್ ಹಾಕಿಕೊಂಡು ಪಾಠ ಕೇಳುತ್ತ, ಪಠ್ಯಕ್ರಮಕ್ಕೆ ಅನುಗುಣವಾಗಿ ಪುಸ್ತಕಗಳಲ್ಲಿ ಚಿತ್ರ ಬಿಡಿಸುತ್ತ ಸದಾ ಅಧ್ಯಯನದಲ್ಲಿ ವ್ಯಸ್ಥರಾಗುವ ವೈದ್ಯಕೀಯ ವಿದ್ಯಾರ್ಥಿಗಳಿಗೆ ಇದು ಮನೋಲ್ಲಾಸ ಹೆಚ್ಚಿಸುವ ಮತ್ತು ಜಗತ್ತಿನಲ್ಲಿಯೇ ವಿನೂನತ ದಾಖಲೆಗೆ ಸಾಕ್ಷಿಯಾಗುವ ಘಟನೆಯಲ್ಲಿ ತಾವೂ ಪಾಲುದಾರರು ಎಂಬ ಹೆಗ್ಗಳಿಕೆಗೆ ಸ್ಫೂರ್ತಿಯಾಯಿತು.

ಈ ಸ್ವಾಸ್ಥ ಸಂತುಲನ ರಂಗೋಲಿ ಮಹೋತ್ಸವ ಗಿನ್ನೇಸ್ ಬುಕ್ ಆಫ್ ರೆಕಾರ್ಡ್ಸ್, ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್, ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್, ಎಲೈಟ್ ವರ್ಲ್ಡ್ ರೆಕಾರ್ಡ್ಸ್, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಸೇರ್ಪಡೆಯತ್ತ ಮಹತ್ವದ ಹೆಜ್ಜೆಯಾಗಿದ್ದು, ಈ ಎಲ್ಲ ದಾಖಲೆ ಸಂಸ್ಥೆಗಳ ಅಧಿಕಾರಿಗಳು ಆನಲೈನ್ ಮೂಲಕ ಪ್ರತಿಕ್ಷಣದ ಮಾಹಿತಿ ಪಡೆದು ಮೆಚ್ಚುಗೆ ವ್ಯಕ್ತಪಡಿಸಿದರು. ಕೆಲವು ದಾಖಲೆ ಏಜೆನ್ಸಿಗಳಿಗೆ ವಿವಿ ಕುಲಾಧಿಪತಿಯೂ ಆಗಿರುವ ಎಂ. ಬಿ. ಪಾಟೀಲ ವಿಡಿಯೋ ಕಾಲ್ ಮೂಲಕ ಕಾರ್ಯಕ್ರಮದ ಮಾಹಿತಿ ವಿನಿಮಯ ಮಾಡಿಕೊಂಡಿರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ. ಭೂಬಾಲನ್, ವಿವಿ ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯ ಡಾ. ಅರವಿಂದ ಪಾಟೀಲ, ವೈದ್ಯಕೀಯ ಅಧೀಕ್ಷಕ ಡಾ. ರಾಜೇಶ ಹೊನ್ನುಟಗಿ, ಐಟಿ ವಿಭಾಗದ ಮುಖ್ಯಸ್ಥ ಡಾ. ದೀಪಕ ಕುಮಾರ ಚವ್ಹಾಣ, ಕಾರ್ಯಕ್ರಮ ಸಂಯೋಜಕಿ ಡಾ. ನಂದಿನಿ ಮುಚ್ಚಂಡಿ, ಡಾ. ರವಿ ಬಿರಾದಾರ, ಡಾ. ಉದಯಕುಮಾರ ನುಚ್ಚಿ, ಡಾ. ದಯಾನಂದ ಮುಂತಾದವರು ಉಪಸ್ಥಿತರಿದ್ದರು.

## ನಾನಾ ಜಾಗತಿಕ ದಾಖಲೆಗಳಿಗೆ ಸೇರುವ :ಸಚಿವ ಪಾಟೀಲ



ವಿಜಯಪುರ: ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳು ಆಯೋಜಿಸಿದ ಸ್ವಾಸ್ಥ ಸಂತುಲನ ರಂಗೋಲಿ ಮಹೋತ್ಸವ ನಾನಾ ಜಾಗತಿಕ ದಾಖಲೆಗಳಿಗೆ ಸೇರ್ಪಡೆಯಾಗಲಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿವಿ ಆವರಣದಲ್ಲಿ 1500 ವೈದ್ಯಕೀಯ ವಿದ್ಯಾರ್ಥಿಗಳು ಬಿಡಿಸಿರುವ ಎಲ್ಲ 250 ರಂಗೋಲಿ ಚಿತ್ರಗಳನ್ನು ವೀಕ್ಷಿಸಿದ ಅವರು, ಮೆಚ್ಚುಗೆ ವ್ಯಕ್ತಪಡಿಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಇದೊಂದು ಐತಿಹಾಸಿಕ ದಿನವಾಗಿದೆ. ಈ ಐತಿಹಾಸಿಕ ಘಟನೆಗೆ ನಾವೆಲ್ಲರೂ ಕೂಡ ಸಾಕ್ಷಿಯಾಗುತ್ತಿದ್ದೇವೆ. ಕಾಲೇಜಿನ ವಿದ್ಯಾರ್ಥಿಗಳು ಮತ್ತು ಶಿಕ್ಷಕರು ಸೇರಿಕೊಂಡು ಸ್ವಾಸ್ಥ್ಯ ರಂಗೋಲಿ ಮಹೋತ್ಸವ ಮಾಡಿದ್ದಾರೆ. ಮನುಷ್ಯರಲ್ಲಿ ಕಾಣಿಸಿಕೊಳ್ಳುವ ರೋಗಗಳು, ದೇಹದ ನಾನಾ ಭಾಗಗಳು, ಅವುಗಳ ಕಾರ್ಯ ನಿರ್ವಹಣೆ, ದುಷ್ಚಟಗಳು ಮತ್ತು ನಿರ್ಲಕ್ಷ್ಯದಿಂದ ಆರೋಗ್ಯದ ಮೇಲಾಗುವ ಪರಿಣಾಮ, ನಾವು ಅವುಗಳನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ರಂಗೋಲಿಯ ಚಿತ್ರಗಳ ಮೂಲಕ ಕೂಲಂಕಷವಾಗಿ ಅರ್ಥಪೂರ್ಣವಾಗಿ ಅರಿವು ಮೂಡಿಸುವ ಪ್ರಯತ್ನ ಮಾಡಲಾಗಿದೆ ಎಂದು ತಿಳಿಸಿದರು.

ಆರೋಗ್ಯದ ಜೊತೆಗೆ ರಾಷ್ಟ್ರೀಯತೆ, ನಾಡಿನ ಪುಣ್ಯಪುರುಷರ ಚಿತ್ರಗಳನ್ನೂ ಸಹ ಬಿಡಿಸಿದ ಮತ್ತು ಇದಕ್ಕೆ ಪ್ರೋತ್ಸಾಹ ನೀಡಿದ ಎಲ್ಲರಿಗೂ ಅಭಿನಂದನೆಗಳನ್ನು ಸಲ್ಲಿಸುತ್ತೇನೆ. ಶುಭ ಹಾರೈಸುತ್ತೇನೆ. ನಾನಾ ಜಾಗತಿಕ ದಾಖಲೆಗಳಲ್ಲಿ ಸೇರ್ಪಡೆಯಾಗುವ ನಿಟ್ಟಿನಲ್ಲಿ ಇದು ಮಹತ್ವದ ಹೆಜ್ಜೆಯಾಗಿದೆ. ಗಿನ್ನೇಸ್ ಬುಕ್ ಆಫ್ ರೆಕಾರ್ಡ್ಸ್, ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್, ಇಂಡಿಯಾ ಬುಕ್ ಆಫ್ ರೆಕಾರ್ಡ್ಸ್, ಎಲೈಟ್ ವರ್ಲ್ಡ್ ರೆಕಾರ್ಡ್ಸ್, ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಎಲ್ಲ ದಾಖಲೆಗಳಿಗೆ ಈ ಮಹೋತ್ಸವ ಸೇರುವ ವಿಶ್ವಾಸವಿದೆ ಎಂದು ಅವರು ತಿಳಿಸಿದರು.

ಇದು ಇಡೀ ಪ್ರಪಂಚದಲ್ಲಿ ಪ್ರಪ್ರಥಮ ಪ್ರಯೋಗ ಇದಾಗಿದೆ. ಇದರ ಬಗ್ಗೆ ಸಾಕಷ್ಟು ಪ್ರಶಂಸೆಗಳು ಬರುತ್ತಿವೆ. ಕೇಂದ್ರ ಆರೋಗ್ಯ ಸಚಿವರಿಗೆ, ನ್ಯಾಷನಲ್ ಮೆಡಿಕಲ್ ಕೌನ್ಸಿಲ್ ಸೇರಿದಂತೆ ನಾನಾ ಸಂಸ್ಥೆಗಳು ಪರಿಶೀಲನೆ ನಡೆಸುತ್ತಿವೆ. ಇದು ಬಹುದೊಡ್ಡ ಪ್ರಯತ್ನವಾಗಿದ್ದು, ಇದರಿಂದ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೂ ಪ್ರೇರಣೆ ಸಿಗಲಿದೆ. ಈ ಮೂಲಕ ಸ್ವಾಸ್ಥ್ಯ ಸಮಾಜ ನಿರ್ಮಾಣವಾಗಬೇಕು ಎನ್ನುವ ಗುರಿ ತಲುಪಲು ಸಾಧ್ಯವಾಗುತ್ತದೆ. ಅಂತಿಮ ಫಲಿತಾಂಶ ಬಂದ ನಂತರ ಎಲ್ಲ ದಾಖಲೆಗಳಿಗೆ ಮಾನ್ಯತೆ ಸಿಗಲಿದೆ ಎಂದು ಎಂ. ಬಿ. ಪಾಟೀಲ ತಿಳಿಸಿದರು.

**ಕರಿಭಂಟನಾಳ ಗುರುಗಂಗಾಧರೇಶ್ವರ ಜಾತ್ರಾಮಹೋತ್ಸವ । ರಾಷ್ಟ್ರೀಯ ಜನಜಾಗೃತಿ ಸಮಾವೇಶ । ಆರೋಗ್ಯಮೇಳ ಸಂವಾದ**

# ಜನರಲ್ಲಿ ಭಕ್ತಿ-ವೈರಾಗ್ಯ-ಜ್ಞಾನದ ಜಾಗೃತಿ ಮೂಡಿಸುವ ಜಾತ್ರೆಗಳು

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ನಾಡಿನಲ್ಲಿ ನಡೆಯುವ ಜಾತ್ರೆಗಳು ಜನರಲ್ಲಿ ಭಕ್ತಿ-ವೈರಾಗ್ಯ-ಜ್ಞಾನದ ಜಾಗೃತಿ ಮೂಡಿಸುತ್ತವೆ. ಜನರು ಜಾತ್ರೆಯಲ್ಲಿ ಭಾಗವಹಿಸುವ ಮೂಲಕ ತಮ್ಮ ಉತ್ಸಾಹ ಹೆಚ್ಚಿಸಿಕೊಳ್ಳುತ್ತಾರೆ. ಈ ಭಾಗದಲ್ಲಿ ನಡೆಯುವ ಕರಿಭಂಟನಾಳ ಗ್ರಾಮದ ಗುರುಗಂಗಾಧರೇಶ್ವರ ಜಾತ್ರಾಮಹೋತ್ಸವದಲ್ಲಿ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಸಾಮಾಜಿಕ ಕಾರ್ಯಕ್ರಮಗಳನ್ನು ಶ್ರೀಮಠದ ಶ್ರೀಗಳು ಹಮ್ಮಿಕೊಳ್ಳುವ ಮೂಲಕ ವೈಶಿಷ್ಠವಾದ ಜಾತ್ರೆಯನ್ನು ಆಚರಿಸುತ್ತಿರುವುದು ಶ್ಲಾಘನೀಯ ಎಂದು ಬೆಂಗಳೂರಿನ ಸರ್ಪಭೂಷಣಮಠದ ಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು.

ತಾಲೂಕಿನ ಕರಿಭಂಟನಾಳ ಗ್ರಾಮದ ಆರಾಧ್ಯದೈವ ಗುರುಗಂಗಾಧರೇಶ್ವರರ ಜಾತ್ರಾಮಹೋತ್ಸವದಂಗವಾಗಿ ಭಾನುವಾರ ಹಮ್ಮಿಕೊಂಡಿದ್ದ ರಾಷ್ಟ್ರೀಯ ಜನಜಾಗೃತಿ ಸಮಾವೇಶ ಹಾಗೂ ಆರೋಗ್ಯಮೇಳ ಸಂವಾದ ಕಾರ್ಯಕ್ರಮದ ಸಾನಿಧ್ಯ ವಹಿಸಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ತ್ರಿಕಾಲ ಜ್ಞಾನ ಸ್ವರೂಪರಾಗಿರುವ ಮಹಾತ್ಮರ ಜಾತ್ರೆಗಳು ನಾಡಿನಲ್ಲಿ ನಡೆಯುತ್ತವೆ. ಜಾತ್ರೆಗಳು ಜನರಲ್ಲಿ ಚೇತನ ಶಕ್ತಿ ತರುತ್ತವೆ. ಆರೋಗ್ಯವಾದ ಶರೀರ ಇರಬೇಕಾದರೆ ನಮ್ಮಲ್ಲಿ ಅರಿವಿನ ಶಕ್ತಿ ಇರಬೇಕು. ನಮ್ಮ ಇಂದ್ರಿಯಗಳನ್ನು ನಿಯಂತ್ರಣದಲ್ಲಿಟ್ಟುಕೊಂಡರೆ ಯಾವ ದುರ್ಗುಣಗಳು ಮೈಗೂಡಲು ಸಾಧ್ಯವಿಲ್ಲ. ಇಂದ್ರಿಯ ನಿಗ್ರಹ ಬಹುಮುಖ್ಯವಾಗಿದೆ. ಭಗವಂತನಲ್ಲಿ ಭಕ್ತಿ ನಿಷ್ಠೆ ಇದ್ದರೆ ಬದುಕು ಸಾರ್ಥಕವಾಗುತ್ತದೆ. ನಾಡಿನಲ್ಲಿ ಸುಭೀಕ್ಷೆ, ಶಾಂತಿ ನೆಲೆಸಲು ಜಾತ್ರೆಗಳು ನಡೆಯುತ್ತವೆ ಎಂದರು.

ಗುರುಗಂಗಾಧರೇಶ್ವರ ಹಿರಮಠದ ಶಿವಕುಮಾರ ಸ್ವಾಮೀಜಿ ಮಾತನಾಡಿದರು. ಗುರುಗಂಗಾಧರೇಶ್ವರರು ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಈ ಭಾಗದಲ್ಲಿ ಜನರನ್ನು ಸಿದ್ದಗೊಳಿಸಿ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗವಹಿಸುವಂತೆ ಪ್ರೇರಣೆ ನೀಡಿದ್ದು ಇತಿಹಾಸದಿಂದ ತಿಳಿದುಬರುತ್ತದೆ. ಶ್ರೀಮಠವು ಆಧ್ಯಾತ್ಮದೊಂದಿಗೆ ಸಾಮಾಜಿಕ ಕಾರ್ಯಗಳನ್ನು ಮೊದಲಿನಿಂದಲೂ ಮಾಡಿಕೊಂಡು ಬರುತ್ತಿದೆ. ನಾವು ಜಾತ್ರೆಯಂಗವಾಗಿ ಪ್ರತಿ ವರ್ಷ ವಿವಿಧ ಜನಪರ ಕಾರ್ಯಗಳನ್ನು ಹಾಕಿಕೊಳ್ಳುವ ಮೂಲಕ ಜಾತ್ರೆಯು ಜನರಿಗೆ ಉಪಯೋಗವಾಗುವಂತೆ ಆಚರಣೆ ಮಾಡಲಾಗುತ್ತಿದೆ. ಬಸವನಬಾಗೇವಾಡಿ ಹಳೆ ತಹಸೀಲ್ದಾರ ಕಚೇರಿಯ ಆವರಣದಲ್ಲಿ ಗುರುಗಂಗಾಧರೇಶ್ವರರಿಂದ ಪ್ರತಿಷ್ಠಾಪಿಸಲಾಗಿದ್ದ ಶಕ್ತಿ ಶಿಲೆಯ ಸಂರಕ್ಷಣೆಯನ್ನು ಮಾಡಬೇಕಾದ ಅಗತ್ಯವಿದೆ ಎಂದರು.

ವಿಜಯಪುರ ಸಂಗಮೇಶ ಆಸ್ಪತ್ರೆಯ ಡಾ.ಎಸ್.ಎಸ್.ಪಾಟೀಲ, ಬೀರಕಬ್ಬಿಯ ಮಲ್ಲಿಕಾರ್ಜುನ ಶಾಸ್ತ್ರೀಜಿ, ಶಂಕರಯ್ಯ ಶಾಸ್ತ್ರೀಜಿ, ವಿಶ್ವನಾಥ ಮಠ, ಪ್ರವಚನಕಾರ ಶಂಕರಯ್ಯ ಶಾಸೀಜಿ, ಡಾ.ಶೈಲೇಶ ಕನ್ನೂರ, ದೇವೇಂದ್ರ ಗೋನಾಳ, ಮಹಾಂತೇಶ ಸಂಗಮ ಮಾತನಾಡಿದರು.

ಕಾರ್ಯಕ್ರಮದಲ್ಲಿ ಬಸನಗೌಡ ಪಾಟೀಲ, ಡಾ.ಮಹಾಂತೇಶ ಹಿರೇಮಠ, ಡಾ.ರಮಾಕಾಂತ ಬಳಲೂಕರ, ಡಾ.ರಾಹುಲ ಬಿರಾದಾರ, ಡಾ.ಬಾಬುಗೌಡ ಬಿರಾದಾರ, ಡಾ.ಪ್ರಿಯಾಂಕ ಬಿರಾದಾರ, ಡಾ.ಮಲ್ಲಿಕಾರ್ಜುನ ಇತರರು ಇದ್ದರು.

ಈರಯ್ಯ ಹಿರೇಮಠ ಸ್ವಾಗತಿಸಿ, ನಿರೂಪಿಸಿದರು. ಕಾರ್ಯಕ್ರಮದಲ್ಲಿ ಬಾಲ ಗಾಯಕಿ ಮಹನ್ಯ ಪಾಟೀಲ ಅವರು ನಡೆಸಿಕೊಟ್ಟ ಸಂಗೀತ ಕಾರ್ಯಕ್ರಮ ಜನಮನ ಸೂರೆಗೊಂಡಿತು.

ಪಲ್ಲಕ್ಕಿ ಉತ್ಸವ, ಅಗ್ನಿ ಹಾಯುವುದು ಗ್ರಾಮದ ಪ್ರಮುಖ ಬೀದಿಗಳಲ್ಲಿ ಗುರುಗಂಗಾಧರೇಶ್ವರರ ಪಲ್ಲಕ್ಕಿ ಉತ್ಸವದ ಮೆರವಣಿಗೆಯು ಪುರವಂತರ ಸೇವೆ, ವಿವಿಧ ವಾದ್ಯಮೇಳದೊಂದಿಗೆ ಸಂಭ್ರಮದಿಂದ ಜರುಗಿತು.

ನಂತರ ಗುರುಗಂಗಾಧರೇಶ್ವರರ ದೇವಸ್ಥಾನ ಮುಂಭಾಗ ಅಗ್ನಿಪೂಜೆ ನೆರವೇರಿದ ನಂತರ ಪುರವಂತರ ಸಹಯೋಗದೊಂದಿಗೆ ಶ್ರೀಮಠದ ಶಿವಕುಮಾರ ಸ್ವಾಮೀಜಿಯವರು ಭಕ್ತರ ಜಯಘೋಷದ ಮಧ್ಯ ಅಗ್ನಿ ಹಾಯ್ದರು. ಸದ್ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು. ಬಿಎಲ್ಡಿಇ ಸಂಸ್ಥೆ ಹಾಗೂ ಸಂಗಮೇಶ್ವರ ಆಸ್ಪತ್ರೆಯ ಸಹಯೋಗದಲ್ಲಿ ತಜ್ಞ ವೈದ್ಯರಿಂದ ಉಚಿತ ಆರೋಗ್ಯ ತಪಾಸಣೆ ಶಿಬಿರ ಜರುಗಿತು.

## ಬಿಜೆಪಿ ವಿವಿಧ ಮೋರ್ಚಾಗಳಿಗೆ ಪದಾಧಿಕಾರಿಗಳ ನೇಮಕ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಬಿಜೆಪಿ ದೇವರಹಿಪ್ಪರಗಿ ಮಂಡಲದ ವಿವಿಧ ಮೋರ್ಚಾಗಳಿಗೆ ನೂತನ ಪದಾಧಿಕಾರಿಗಳನ್ನು ನೇಮಕ ಮಾಡಲಾಗಿದೆ.

ಮಂಡಲದ ಖಜಾಂಚಿಯಾಗಿ ಸೋಮಶೇಖರ ಹಿರೇಮಠ, ಪ್ರಧಾನ ಕಾರ್ಯದರ್ಶಿಯಾಗಿ ಮಹಾಂತೇಶ ಬಿರಾದಾರ(ಬೂದಿಹಾಳ ಡೋಣ), ಯುವಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾಗಿ ಪ್ರಕಾಶ ಡೋಣುರಮಠ(ಸಾತಿಹಾಳ), ಶಿವರಾಜ್ ತಳವಾರ, ಹಿಂದುಳಿದ ವರ್ಗಗಳ ಮೋರ್ಚಾ ಪ್ರಧಾನ ಕಾರ್ಯದರ್ಶಿಯಾಗಿ ರಮೇಶ ಈಳಗೇರ, ಸಾಮಾಜಿಕ ಜಾಲತಾಣ ಸಂಚಾಲಕರಾಗಿ ಆಕಾಶ ಕಬ್ಬಿನ(ಪಡಗಾನೂರ) ನೇಮಕಗೊಂಡಿದ್ದಾರೆ ಎಂದು ಮಂಡಲ ಪ್ರಕಟಣೆ ಮೂಲಕ ತಿಳಿಸಿದೆ.

# ಬಸವೇಶ್ವರ ಸೇವಾ ಸಮಿತಿಯಿಂದ ಸಿಎಂ ಗೆ ಸನ್ಮಾನ

**ಉದಯರಶ್ಮಿ ನ್ಯೂಸ್**



ಬಸವನಬಾಗೇವಾಡಿ: ಬಸವ ಜನ್ಮ ಬಸವನಬಾಗೇವಾಡಿಯು ಅಭಿವೃದ್ಧಿಗೆ ಸಿಎಂ ಸಿದ್ದರಾಮಯ್ಯನವರು ಬಜೆಟ್ ನಲ್ಲಿ ಬಸವನಬಾಗೇವಾಡಿಗೆ ಪ್ರತ್ಯೇಕ ಪ್ರಾಧಿಕಾರ ಘೋಷಣೆ ಮಾಡಿದ ಹಿನ್ನೆಲೆಯಲ್ಲಿ ಸ್ಥಳೀಯ ಬಸವೇಶ್ವರ ಸೇವಾ ಸಮಿತಿ ಪದಾಧಿಕಾರಿಗಳು ಸೋಮವಾರ ಬೆಂಗಳೂರಿನ ಮುಖ್ಯಮಂತ್ರಿಗಳ ಕಾವೇರಿ ನಿವಾಸದಲ್ಲಿ ಜವಳಿ ಕಬ್ಬು ಅಭಿವೃದ್ಧಿ ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವಿಶ್ವಗುರು ಬಸವಣ್ಣನವರ ಬೆಳ್ಳಿ ಮೂರ್ತಿಯನ್ನು ಕೊಡುವ ಮೂಲಕ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಮೇ.10 ರಂದು ಬಸವ ಜಯಂತಿ ಕಾರ್ಯಕ್ರಮಕ್ಕೆ ಬಸವ ಜನ್ಮಸ್ಥಳ ಬಸವನಬಾಗೇವಾಡಿಗೆ ಆಗಮಿಸಬೇಕೆಂದು ಮನವಿ ಮಾಡಿಕೊಳ್ಳಲಾಯಿತು. ಇದಕ್ಕೆ ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದರು.

ಈ ಸಂದರ್ಭದಲ್ಲಿ ವಿರಕ್ತಮಠದ ಸಿದ್ಧಲಿಂಗ ಸ್ವಾಮೀಜಿ ,ಬಸವೇಶ್ವರ ಸೇವಾ ಸಮಿತಿಯ ಅಧ್ಯಕ್ಷ ಈರಣ್ಣ ಪಟ್ಟಣಶೆಟ್ಟಿ, ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ, ಮುಖಂಡರಾದ ಅನಿಲ ಅಗರವಾಲ, ಸಂಗಮೇಶ ಓಲೇಕಾರ, ಸಂಗಣ್ಣ ಕಲ್ಲೂರ, ಶೇಖರ ಗೊಳಸಂಗಿ, ಬಸವರಾಜ ಕೋಟಿ, ಬಸವರಾಜ ಹಾರಿವಾಳ, ರವಿ ರಾಠೋಡ, ಮಹಾಂತೇಶ ಆದಿಗೊಂಡ, ಸುಭಾಷ ಚಿಕ್ಕೊಂಡ, ಬಸವರಾಜ ಗೊಳಸಂಗಿ, ಸಂಕನಗೌಡ ಪಾಟೀಲ, ಶೇಖರಗೌಡ ಪಾಟೀಲ ಇತರರು ಇದ್ದರು.

## ಎನ್.ಸಿ.ಸಿ. ನೂತನ ಕಟ್ಟಡಕ್ಕೆ ಸಚಿವ ಎಂ.ಬಿ.ಪಾಟೀಲ ಭೂಮಿಪೂಜೆ



**ಉದಯರಶ್ಮಿ ನ್ಯೂಸ್**

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಆರ್ಥಿಕ ಸಹಾಯದಲ್ಲಿ ಜಿಲ್ಲಾ ಕೇಂದ್ರ ಕಾರಾಗೃಹ ಸಮಿಪ ನಿರ್ಮಿಸಲಾಗುತ್ತಿರುವ ಎನ್.ಸಿ.ಸಿ. ನೂತನ ಕಟ್ಟಡಕ್ಕೆ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ರವಿವಾರ ಭೂಮಿಪೂಜೆ ನೆರವೇರಿಸಿದರು.

ಎನ್.ಸಿ.ಸಿಗೆ ಸೇರಿದ ಐದು ಎಕರೆ ಪ್ರದೇಶದಲ್ಲಿ 16000 ಚದುರ ಅಡಿ ಪ್ರದೇಶದಲ್ಲಿ ನೂತನ ಕಟ್ಟಡ ನಿರ್ಮಾಣವಾಗಲಿದ್ದು, ಒಂದು ಅಂತಸ್ತಿನ ಬಿಲ್ಡಿಂಗ್ ಇದಾಗಿದೆ. ಒಂಬತ್ತು ತಿಂಗಳಲ್ಲಿ ಈ ಕಟ್ಟಡ ನಿರ್ಮಿಸುವ ಗುರಿಯಿದೆ.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಟಿ. ಭೂಬಾಲನ್, ಎಸ್ಪಿ ಋಷಿಕೇಶ ಸೋನಾವಣೆ, ಕನಲ್ ಗಿರೀಶ್ ಶಿಂಧೆ, ಸಬ್ ಮೇಜರ್ ಜಿ. ಎನ್. ಕುರಂದಳೆ, ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಡಾ. ಆರ್. ಬಿ. ಕೊಟ್ನಾಳ, ಸಂಸ್ಥೆಯ ಅಧೀಕ್ಷಕ ಎಸ್. ಎ. ಬಿರಾದಾರ(ಕನ್ನಾಳ), ಎಂಜಿನಿಯರ್‌ಗಳಾದ ಆರ್. ಎಸ್. ಜಿರಲಿ, ಯು. ಎನ್. ಕರಡಿ, ಉಪಮೇಯರ್ ದಿನೇಶ ಹಳ್ಳಿ, ಡಾ. ಮಹಾಂತೇಶ ಬಿರಾದಾರ, ಸುರೇಶ ಘೊಣಸಗಿ ಮುಂತಾದವರು ಉಪಸ್ಥಿತರಿದ್ದರು.

# ಗಬಸಾವಳಗಿಯನ್ನು ಸಿಂದಗಿ ತಾಲೂಕಿಗೆ ಸೇರಿಸಲು ಧರಣಿ ಸತ್ಯಾಗ್ರಹ



**ಉದಯರಶ್ಮಿ ನ್ಯೂಸ್**

ಸಿಂದಗಿ: ತಾಲೂಕನ್ನು ವಿಭಜನೆ ಮಾಡಿದಾಗ ಸಿಂದಗಿಯಿಂದ ಕೇವಲ ಹನ್ನೆರಡು ಕಿಲೋಮೀಟರ್ ದೂರವಿರುವ ಗಬಸಾವಳಗಿ ಗ್ರಾಮವನ್ನು ಸುಮಾರು 40ಕಿಮೀ. ದೂರವಿರುವ ಆಲಮೇಲ ತಾಲೂಕಿಗೆ ಸೇರಿಸಿದ್ದು ಗಬಸಾವಳಗಿ ಹಾಗೂ ಬಿಸನಾಳ ಗ್ರಾಮಸ್ಥರಿಗೆ ಮಾಡಿದ ದೊಡ್ಡ ಅನ್ಯಾಯವಾಗಿದೆ ಎಂದು ಪತ್ರಕರ್ತ ಮಲ್ಲಿಕಾರ್ಜುನ ಹಿರೇಮಠ ಹೇಳಿದರು.

ಗಬಸಾವಾಳಗಿ ಗ್ರಾಮದಲ್ಲಿ ಹೋರಾಟ ವೇದಿಕೆಯ ಸದಸ್ಯರು ಹಾಗೂ ಗ್ರಾಮಸ್ಥರು ಹಮ್ಮಿಕೊಂಡಿದ್ದ ಧರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಗಬಸಾವಳಗಿ ಹಾಗೂ ಬಿಸನಾಳ ಎರಡೂ ಗ್ರಾಮದ ಗ್ರಾಮಸ್ಥರು ಪ್ರತಿದಿನ ತಮ್ಮ ವ್ಯಾಪಾರ ವ್ಯವಹಾರಗಳಿಗಾಗಿ, ಯಾವುದೇ ಸರಕಾರಿ ಕಾರ್ಯಾಲಯ ಕೆಲಸಗಳಿಗಾಗಿ ಸಿಂದಗಿಯನ್ನೇ ಅವಲಂಬಿಸಿದ್ದಾರೆ. ಒಂದು ವೇಳೆ ಅಲಮೇಲ ತಾಲೂಕಿನಲ್ಲಿಯೇ ಮುಂದುವರಿಸಿದ್ದಾದರೆ ಗ್ರಾಮಸ್ಥರು ದಿನನಿತ್ಯ ಪರದಾಡುವಂತಾಗುತ್ತದೆ. ಈ ಎಲ್ಲ ಬವಣೆಗಳಿಗೆ ಕೊನೆ ಹಾಡಬೇಕಾದರೆ ಗಬಸಾವಳಗಿ ಹಾಗೂ ಬಿಸನಾಳ ಗ್ರಾಮಗಳನ್ನು ಸಿಂದಗಿ ತಾಲೂಕಿಗೆ ಮರು ಸೇರ್ಪಡೆ ಮಾಡಬೇಕೆಂದು ತಾಲೂಕು ಆಡಳಿತ ಹಾಗೂ ಶಾಸಕರಲ್ಲಿ ಮನವಿ ಮಾಡಿದರು.

ಗಬಸಾವಳಗಿ ಹಾಗೂ ಬಿಸನಾಳ ಗ್ರಾಮಗಳನ್ನು ಆಲಮೇಲಕ್ಕೆ ಸೇರಿಸಿದ್ದು ಅವೈಜ್ಞಾನಿಕ ವಾಗಿದೆ.

ಗಬಸಾವಳಗಿ, ಬಿಸನಾಳ ಗ್ರಾಮಗಳ ಸುತ್ತಲಿನ ಗ್ರಾಮಗಳಾದ ಹಂಚಿನಾಳ, ಗುತ್ತರಗಿ, ಭಂಟನೂರ ಗ್ರಾಮಗಳು ಮರಳಿ 16-02-2022ರಂದು ಸಿಂದಗಿ ತಾಲೂಕಿಗೆ ಮರು ಸೇರ್ಪಡೆ ಆಗಿದೆ. ಅದೆ ರೀತಿ ಆಲಮೆಲ ತಾಲೂಕಿಗೆ ಸೇರಿಸಿದ ಗಾಬಸಾವಳಗಿ ಹಾಗೂ ಬಿಸಾನಾಳ ಈ ಎರಡು ಗ್ರಾಮಗಳನ್ನು ಮರಳಿ ಸಿಂದಗಿ ತಾಲೂಕಿಗೆ ಸೇರಿಸಬೇಕು ಎಂದು ಆಗ್ರಹಿಸಿದರು.

ರೈತ ಸಂಘದ ಅಧ್ಯಕ್ಷ ಶಿವಲಿಂಗಪ್ಪಗೌಡ. ನಾ ಬಿರಾದಾರ, ಅಶೋಕ. ಮ ಬಿರಾದಾರ,

ಸುರೇಶಬಾಬು ಕೋಟಿಖಾನಿ ಮಾತನಾಡಿದರು.

ಪ್ರತಿಭಟನೆಯಲ್ಲಿ ಭೀಮನಗೌಡ. ಎ ಬಿರಾದಾರ, ನಾನಾಗೌಡ. ಯ ಬಿರಾದಾರ, ಅಯ್ಯಪ್ಪಗೌಡ.ಪ ಬಿರಾದಾರ, ಪ್ರಭುಗೌಡ ಬಿರಾದಾರ, ಮಲ್ಲನಗೌಡ.ಪ ಬಿರಾದಾರ, ದೇವು. ಚ ಕೊಳಕುರ, ಅಣ್ಣಾರಾಯ. ರಾ ಪಪೀರಾಪುರ, ಮಲ್ಲಿಕಾರ್ಜುನ. ಬಿ ಬಿರಾದಾರ, ಪರಶುರಾಮ. ಸೊ ಅನಶೆಟ್ಟಿ, ಬಸನಗೌಡ. ನಾ ಬಿರಾದಾರ, ಮಲ್ಲನಗೌಡ, ಬಂಗಾರೆಪ್ಪಗೌಡ. ಬಾ ಬಿರಾದಾರ, ಶಿವಶರಣ ಹೇಳವರ ಸೇರಿದಂತೆ ಇತರರು ಇದ್ದರು.

# ನೂತನ ಅಧ್ಯಕ್ಷ ಲಾಡ್ಲೇಮಶಾಕ ಗೆ ಸನ್ಮಾನ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಬ್ಲಾಕ್ ಕಾಂಗ್ರೆಸ್ ಸಮಿತಿ ಅಲ್ಪಸಂಖ್ಯಾತ ವಿಭಾಗದ ನೂತನ ಅಧ್ಯಕ್ಷರಾಗಿ ನೇಮಕಗೊಂಡ ಲಾಡ್ಲೇಮಶಾಕ ರೂಗಿ ಅವರನ್ನು ಕಾಂಗ್ರೆಸ್ ಕಾರ್ಯಕರ್ತರು ಮೊಹರೆ ಹಣಮಂತ್ರಾಯ ವೃತ್ತದಲ್ಲಿ ಸನ್ಮಾನಿಸಿದರು.

ಅಂಜುಮನ್ ಅಧ್ಯಕ್ಷ ಲಾಲಸಾಬ್ ಮಳಖೇಡ, ಪಟ್ಟಣ ಪಂಚಾಯಿತಿ ನಾಮನಿರ್ದೇಶಿತ ಸದಸ್ಯರಾದ ಸುನೀಲ ಕನಮಡಿ, ಹುಸೇನ್ ಕೊಕಟನೂರ, ಬಂದೇನವಾಜ್ ಹಳ್ಳಿ, ಹಾಜಿಲಾಲ್ ಕರ್ನಾಚಿ, ಭಾಷಾಸಾಬ್ ಹಳ್ಳಿ, ಮೊಹಮ್ಮದ ರಫಿಕ್ ಮೋಮಿನ್, ಬಸವರಾಜ ಅತನೂರ, ಬಸಪ್ಪ ನಾಟೀಕಾರ, ಸಂಜೀವ ಬಜಂತ್ರಿ, ಹಸನ್ ನಧಾಫ್, ಎ.ಎಮ್.ನಧಾಫ್, ಯಮನೂರಿ ದೇವಣಗಾಂವ, ರಾಜು ಈಳಗೇರ, ಚಿದಾನಂದ ಹಡಪದ, ಅನೀಲ ಹಡಪದ, ಶಫೀಕ ಕಲಾಲ್ ಇದ್ದರು.

# ತಾಳಿಕೋಟಿ: ಮಾ.13 ರಂದು ಲೋಕಾ ಪೊಲೀಸರಿಂದ ಅಹವಾಲು ಸ್ವೀಕಾರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧಿಕಾರಿಗಳು ಜಿಲ್ಲೆಯ ತಾಳಿಕೋಟಿ ತಾಲೂಕು ಪಂಚಾಯತಿ ಸಭಾ ಭವನದಲ್ಲಿ ಮಾರ್ಚ್ 13 ರಂದು ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಲೋಕಾಯುಕ್ತ ಪೊಲೀಸ್ ಉಪಾಧೀಕ್ಷಕರ (ಮೊ:9364062557), ಪೊಲೀಸ್ ಇನ್‌ಸ್ಪೆಕ್ಟರ್-1 (ಮೊ:9364062640), ಪೊಲೀಸ್ ಇನ್‌ಸ್ಪೆಕ್ಟರ್-2 (ಮೊ:9364062639) ಇವರು ಅಂದು ಬೆಳಿಗ್ಗೆ 11 ಗಂಟೆಯಿಂದ ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಅಹವಾಲು ಕಾರ್ಯಕ್ರಮದಲ್ಲಿ ಸಾರ್ವಜನಿಕರಿಂದ ಭರ್ತಿ ಮಾಡಿದ ಮತ್ತು ನೋಟರಿಯಿಂದ ಅಫಿಡವಿಟ್ ಮಾಡಿಸಿದ ಅರ್ಜಿಗಳನ್ನು ಸ್ವೀಕರಿಸಲಾಗುವುದು. ಸರ್ಕಾರಿ ಕಚೇರಿಗಳಲ್ಲಿ ಅಧಿಕೃತವಾಗಿ ಕೆಲಸಗಳನ್ನು ಮಾಡಿಕೊಡುವಲ್ಲಿ ವಿಳಂಬ ಹಾಗೂ ಲಂಚದ ಬೇಡಿಕೆ ಇನ್ನಿತರೆ ತೊಂದರೆ ನೀಡುತ್ತಿರುವ ಅಧಿಕಾರಿ-ಸಿಬ್ಬಂದಿಗಳ ವಿರುದ್ಧ ಸಾರ್ವಜನಿಕರು ದೂರುಗಳನ್ನು ನೀಡಬಹುದಾಗಿದೆ. ಸ್ಥಳದಲ್ಲಿ ಪರಿಹಾರ ಕಂಡುಕೊಳ್ಳಬಹುದಾದ ದೂರುಗಳನ್ನು ಅಲ್ಲಿನ ಸ್ಥಳೀಯ ಅಧಿಕಾರಿಗಳ ಸಹಯೋಗದಲ್ಲಿ ಇತ್ಯರ್ಥಪಡಿಸಲು ಪ್ರಯತ್ನಿಸಲಾಗುವುದು ಹಾಗೂ ಸರಕಾರಿ ಅಧಿಕಾರಿಗಳು ಅಕ್ರಮ ಆಸ್ತಿ ಸಂಪಾದನೆ, ಸರಕಾರಿ ಹಣದ ದುರುಪಯೋಗ, ಕಳಪೆ ಕಾಮಗಾರಿ ಹಾಗೂ ಇತರೆ ಯಾವುದೇ ರೀತಿಯ ದೂರುಗಳಿಗಾಗಿ ಕಚೇರಿ ದೂರವಾಣಿ: 08352-255333, 257786, 295074 ಸಂಖ್ಯೆಗೆ ಸಂಪರ್ಕಿಸಬಹುದಾಗಿದೆ ಲೋಕಾಯುಕ್ತ ಪೊಲೀಸ್ ಅಧಿಕ್ಷಕರಾದ ಟಿ.ಮಲ್ಲೇಶ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿಂದಗಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕ ಮನಗೂಳಿ ಚಾಲನೆ

# ತ್ವರಿತ ಮತ್ತು ಗುಣಮಟ್ಟದ ಕಾಮಗಾರಿಗೆ ಆದ್ಯತೆ ನೀಡಿ

**ಉದಯರಶ್ಮಿ ನ್ಯೂಸ್**



ಸಿಂದಗಿ: ನಗರದ ಅಲ್ಪ ಸಂಖ್ಯಾತರ ಕಾಲೋನಿಗಳನ್ನು ಅಭಿವೃದ್ಧಿ ಮಾಡುವ ನಿಟ್ಟಿನಲ್ಲಿ ಸಚಿವ ಜಮೀರ್ ಅಹ್ಮದ ಅವರು 5ಕೋಟಿ ಅನುದಾನವನ್ನು ಮಂಜೂರು ಮಾಡಿದ್ದಾರೆ, ಅದರಲ್ಲಿ 2ಕೋಟಿ 85ಲಕ್ಷ ರೂ. ಅನುದಾನ ಮಹಮ್ಮದಿಯಾ ನಗರಕ್ಕೆ ಮೀಸಲು ಇಟ್ಟಿದ್ದೇವೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಪಟ್ಟಣದ 7ನೆಯ ವಾರ್ಡಿನ ಮಹಮ್ಮದಿಯಾ ನಗರದಲ್ಲಿ ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ವಿಜಯಪುರ ಕೆಎಸ್‌ಎಚ್‌ಸಿ ಅನುಷ್ಠಾನದ 2023–24ನೆಯ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಅನುದಾನದ ಅಡಿಯಲ್ಲಿ ಹಮ್ಮಿಕೊಂಡ ಸಿಸಿ ರಸ್ತೆ, ಪೇವರ್ಸ್ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೇರವೇರಿಸಿ ಮಾತನಾಡಿದ ಅವರು, 1 ಕೋಟಿ 11ಲಕ್ಷ ರೂ. ಶಿವಶಂಕರ ಬಡಾವಣೆಯಲ್ಲಿ ವಾಸಿಸುವ ಅಲ್ಪ ಸಂಖ್ಯಾತರಿಗೆ ರಸ್ತೆ ಮತ್ತು ಚರಂಡಿಗಾಗಿ ಮೀಸಲಿಟ್ಟಿದೆ. 9ನೆಯ ವಾರ್ಡಿಗೆ 45ಲಕ್ಷ ರೂ. ಮೀಸಲು. 17ನೆಯ ವಾರ್ಡ ಸರಕಾರಿ ಆಸ್ಪತ್ರೆಯ ಹಿಂದುಗಡೆ ವಾಸಿಸುವ ಅಲ್ಪ ಸಂಖ್ಯಾತರ ಅಭಿವೃದ್ಧಿ 55ಲಕ್ಷ ರೂ. ಮೀಸಲಿಟ್ಟು ಒಟ್ಟು ಸಿಂದಗಿ ನಗರಕ್ಕೆ 5ಕೋಟಿ ರೂ. ಅನುದಾನ ಅಭಿವೃದ್ಧಿಗಾಗಿ ಇಟ್ಟಿದ್ದೇವೆ ಎಂದರು.

ಬಹಳ ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ 7ನೆಯ ವಾರ್ಡಿನ ಶಾದಿ ಮಹಲಕ್ಕೆ ಈಗಾಗಲೇ 20ಲಕ್ಷ ರೂ. ಅನುದಾನ ಮಂಜೂರಾಗಿದೆ. ಗಾಜಿ ಹುಸೇನ ದರ್ಗಾಕ್ಕೆ 30ಲಕ್ಷರೂ ಅನುದಾನ ಮೀಸಲಿಟ್ಟು ದರ್ಗಾ ಅಭಿವೃದ್ಧಿಗೊಳಿಸುವೆ. ನಗರದ 23ವಾರ್ಡನಲ್ಲಿ ವಾಸಿಸುವ ಪ್ರತಿಯೊಬ್ಬ ಪ್ರಜೆಗೆ ಸರಕಾರದ ಅನುದಾನವನ್ನು ಮುಟ್ಟಿಸುವ ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ. ನಮ್ಮ ತಂದೆಯವರ ಕಾಲದಿಂದಲೂ ನಮ್ಮ ಮನೆತನ 9ಚುನಾವಣೆ ಎದುರಿಸಿದೆ. ನಾವು ಯಾವುದೇ ಪಕ್ಷದಿಂದ ಚುನಾವಣೆಯ ಕಣಕ್ಕೆ ಇಳಿದು ಸೋಲಲಿ ಗೆಲುವು ಪಡೆದುಕೊಳ್ಳಲಿ ನಗರ ಜನತೆಯ ಆಶೀರ್ವಾದ ನಮ್ಮ ಮನೆತನದ ಮೇಲಿದೆ ಎಂದರು.

ಈ ವೇಳೆ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಸುರೇಶ ಪೂಜಾರ ಮಾತನಾಡಿ, ತಾಲೂಕಿನಲ್ಲಿ 20ವರ್ಷಗಳ ನಂತರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಈ ವರ್ಷದ ಅವಧಿಯಲ್ಲಿ ಸಿಂದಗಿ ಮತಕ್ಷೇತ್ರದ ಸಮಗ್ರ ಅಭಿವೃದ್ಧಿ ಮಾಡುವ ಗುರಿಯನ್ನು ಈಗಿನ ಶಾಸಕರು ಹೊಂದಿದ್ದಾರೆ. ಸಿಸಿ ರಸ್ತೆ, ಚರಂಡಿ ಕಾರ್ಯವನ್ನು ಹಿಡಿದ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿ ಮಾಡಬೇಕು. ಮತ್ತು ಸಾರ್ವಜನಿಕರು ಗುಣಮಟ್ಟದ ಕಾಮಗಾರಿಯನ್ನು ಮಾಡಿಸಿಕೊಳ್ಳಬೇಕು. ಒಳ್ಳೆಯ ಕಾಮಗಾರಿಗೆ ನಿಮ್ಮ ಸಹಕಾರ ಇರಲಿ ಎಂದು ಹೇಳಿದರು.

ಪಟ್ಟಣದ ವೊಗಲಾಯಿ ಕಾಂಪ್ಲೆಕ್ಷಯಿಂದ ಶಾಂತವೀರ ಮನಗೂಳಿ ಅವರ ಮನೆಯವರೆಗೆ 28.50ಲಕ್ಷ ರೂ. ಮೊತ್ತದ 2023–24ನೆಯ ಸಾಲಿನ ಎಸ್.ಎಫ್.ಸಿ ಅನುದಾನದಲ್ಲಿ ಸಿಸಿ ರಸ್ತೆ ನಿರ್ಮಾಣ. 15ನೆಯ ಹಣಕಾಸಿನ ಅನುದಾನದಲ್ಲಿ ವಿದ್ಯಾನಗರ 1ನೆಯ ಕ್ರಾಸ್ ಸುಶ್ಮಾ ಕೋಚಿಂಗ್ ಶಾಲೆಯ ಹಿಂದಿಗಡೆಯಿರುವ ಉದ್ಯಾನವನಕ್ಕೆ 14.64ಲಕ್ಷ ರೂ.ಅನುದಾನದಲ್ಲಿ ಅಭಿವೃದ್ಧಿ ಪಡಿಸುವುದು. ಪಟ್ಟಣದ 5 ಸರಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕವನ್ನು 54.90ಲಕ್ಷ ರೂ. ಅನುದಾನದಲ್ಲಿ ನಿರ್ಮಿಸುವುದು.

ಈ ಸಂದರ್ಭದಲ್ಲಿ ಇಂಡಿ ಉಪವಿಭಾಗಾಧಿಕಾರಿ ಅಬೀದ ಗದ್ಯಾಳ, ಸುನಂದಾ ಯಂಪುರೆ, ಎಂ.ಎ.ಖತೀಬ, ಡಾ.ಗಿರೀಶ ಕುಲಕರ್ಣಿ ಮಾತನಾಡಿದರು.

ಪುರಸಭೆ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ, ಪಿಡಬ್ಲೂಡಿ ಅಭಿಯಂತರ ತಾರಾನಾಥ ರಾಠೋಡ, ಜೆಇ ಆಕಾಶ, ಮಹಾನಂದ ಬಮ್ಮಣ್ಣಿ, ಪುರಸಭೆ ಮಾಜಿ ಅಧ್ಯಕ್ಷ, ಹಾಲಿ ಸದಸ್ಯ ಡಾ.ಶಾಂತವೀರ ಮನಗೂಳಿ, ಡಾ.ಚನ್ನವೀರ ಮನಗೂಳಿ(ಮುತ್ತು), ಭಾಷಾಸಾಬ ತಾಂಬೋಳಿ, ಹಾಸಿಂಪೀರ ಆಳಂದ, ಬಸವರಾಜ ಯರನಾಳ, ಶಾಂತವೀರ ಬಿರಾದಾರ, ಉಮೇಶ ಜೋಗುರ, ಜಯಶ್ರೀ ಹದನೂರ, ಪ್ರತಿಭಾ ಚಳ್ಳಗಿ, ಬಶೀರ್ ಮರ್ತೂರ, ಸೈಪನ್ ಖೇಡ, ಮಮತಾಜ್ ಖೇಡ, ರಜತ್ ತಾಂಬೆ, ಖಲೀಲ ಬಡಿಗೇರ, ಮಹಿಬೂಬಸಾಬ ಶಾಹಾಪೂರ, ಪಾರೂಕ್ ಅಳ್ಳೊಳ್ಳಿ, ರಫಿಕ್ ಹುಣಶ್ಯಾಳ, ಸಂಗೀತಾ ತಿಕೋಟೆ, ವಿಜಯಕುಮಾರ ತಿಕೋಟೆ ಸೇರಿದಂತೆ ಅನೇಕರು ಇದ್ದರು.

### ಎರಡೇ ದಿನಗಳಲ್ಲಿ ಬೋರವೆಲ್ ಕೊರೆಸಿ

ಪಟ್ಟಣದ 7ನೆಯ ವಾರ್ಡಿನಲ್ಲಿ ನೀರಿನ ಬವಣೆ ಎದುರಾಗಿದೆ ಎಂದು ತಮ್ಮ ಸಮಸ್ಯೆಯನ್ನು ವಾರ್ಡ ನಿವಾಸಿಗಳು ತೊಡಿಕೊಂಡಿದ್ದಾರೆ. ಅದಕ್ಕೆ ಇನ್ನು ಕೇವಲ ಎರಡು ದಿನಗಳಲ್ಲಿ 1 ಬೋರವೆಲ್ ಕೊರೆಸುವಂತೆ ಶಾಸಕ ಮನಗೂಳಿ ಪುರಸಭೆ ಮುಖ್ಯಾಧಿಕಾರಿಗೆ ಸೂಚಿಸಿದರು.

# ಮಕ್ಕಳಿಗೆ ಸಂಸ್ಕಾರಭರಿತ ಶಿಕ್ಷಣ ಅವಶ್ಯ :ಡಾ.ಸಂತೋಷ



**ಉದಯರಶ್ಮಿ ನ್ಯೂಸ್**

ಸಿಂದಗಿ: ಪ್ರಸ್ತುತ ಮಕ್ಕಳ ಶಿಕ್ಷಣದ ಪ್ರಗತಿಯಲ್ಲಿ ಶಿಕ್ಷಕರಿಗಿಂತಲೂ ಪಾಲಕರ ಜವಾಬ್ದಾರಿ ಮತ್ತು ಹೊಣೆಗಾರಿಕೆ ಅತ್ಯಂತ ಪ್ರಮುಖವಾಗಿದೆ ಎಂದು ಯವ ಸಾಹಿತಿ ಡಾ. ಸಂತೋಷ ಬಿ. ನವಲಗುಂದ ಅವರು ಹೇಳಿದರು.

ತಾಲೂಕಿನ ಹೊನ್ನಳ್ಳಿ ಗ್ರಾಮದ ಪ್ರಿಯದರ್ಶಿನಿ ಶಿಕ್ಷಣ ಸಂಸ್ಥೆಯ ಶ್ರೀ ಸರಸ್ವತಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಯ 18ನೇ ವಾರ್ಷಿಕ ಸ್ನೇಹ ಸಮ್ಮೇಳನದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು.

ಸರ್ಕಾರಗಳು ಬದಲಾದಂತೆ ಮಕ್ಕಳಿಗೆ ನೀಡುವ ಶಿಕ್ಷಣ ಪದ್ಧತಿಯು ಬದಲಾಗುತ್ತಾ ಹೋಗುತ್ತಿದೆ. ಈ ವರ್ಷ ಅಭ್ಯಾಸ ಮಾಡಿದ ಪಠ್ಯವಸ್ತು ಮರು ವರ್ಷ ಇರುತ್ತದೆ ಎಂಬ ನಂಬಿಕೆ ಉಳಿದಿಲ್ಲ. ಇವತ್ತು ಮಕ್ಕಳ ಶಿಕ್ಷಣದ ಜೊತೆಗೆ ಸರ್ಕಾರಗಳು ಒಂದು ರೀತಿಯ ಆಟ ಆಡುತ್ತಿವೆ ಎಂಬ ಭಾವನೆ ಎಲ್ಲರಲ್ಲಿಯೂ ಮೂಡುತ್ತಿದೆ. ಇಂತಹ ಸಂದಿಗ್ಧ ಸ್ಥಿತಿಯಲ್ಲಿ ಪಾಲಕರಾದವರು ತಮ್ಮ ಮಕ್ಕಳಿಗೆ ಯಾವ ನಿಟ್ಟಿನಲ್ಲಿ ಶಿಕ್ಷಣ ಒದಗಿಸಬೇಕೆಂದು ಗಂಭೀರ ಆಲೋಚನೆ ಮಾಡಿಯೇ ಶಾಲೆಗಳಿಗೆ ದಾಖಲಿಸಬೇಕಾಗಿದೆ ಎಂದು ಸಲಹೆ ನೀಡಿದರು.

ಈ ವೇಳೆ, ಇದೇ ಶಾಲೆಯಲ್ಲಿ ಕಲಿತು ಉನ್ನತ ಪದವಿಗಳಲ್ಲಿರುವ ಸಾಧಕರಿಗೆ ವಿಶೇಷವಾಗಿ ಸತ್ಕರಿಸಲಾಯಿತು.

ಈ ಸಂದರ್ಭದಲ್ಲಿ ಹೊನ್ನಳ್ಳಿಯ ವೀರಘಂಟಿ ಶ್ರೀ ಮಡಿವಾಳೇಶ್ವರ ಮಠದ ಕಲ್ಯಾಣದಯ್ಯ ಸ್ವಾಮಿಗಳು, ಗುರುಲಿಂಗಯ್ಯ ಸ್ವಾಮಿಗಳು ಸಾನಿಧ್ಯ ವಹಿಸಿದ್ದರು. ಹಣಮಂತ್ರಾಯಗೌಡ ಚೌಧರಿ ಅಧ್ಯಕ್ಷತೆ ವಹಿಸಿದ್ದರು. ಮುಖಂಡರಾದ ವಿಜುಗೌಡ ಬಿರಾದಾರ, ಗುರುನಾಥ ರೆಡ್ಡಿ ಚೌಧರಿ, ಮಹಾಂತಗೌಡ ಚೌಧರಿ, ಗುರಣ್ಣ ಸಜ್ಜನ, ಆರ್ .ಟಿ. ಪಾಟೀಲ, ಡಾ. ಎನ್.ಪಿ.ನಾಯ್ಕೋಡಿ. ಸಾಯೀಪಟೇಲ ಬೋಜಾರ್, ಬಾಲಚಂದ್ರ ಭಜಂತ್ರಿ, ಈರಣ್ಣ ಭಜಂತ್ರಿ, ಮಕ್ತುಮ್ ಸಾಬ ತಂಗಡಗಿ, ಕರಬಸು ಮನಗೂಳಿ, ಇಸ್ಮಾಯಿಲ್ ತಂಗಡಗಿ, ಶಾಲೆಯ ಮುಖ್ಯಸ್ಥ ಮಲ್ಲಿಕಾರ್ಜುನ ಭಜಂತ್ರಿ, ಹಣಮಂತ ಎಂಟಮನಿ, ಶರಣಬಸು ಭಜಂತ್ರಿ ಇದ್ದರು.

ರಮೇಶ ಗುಬ್ಬೇವಾಡ ನಿರೂಪಿಸಿ, ವಂದಿಸಿದರು.

# ಪಿಂಚಣಿ ಅದಾಲತ್ ಸಹಕಾರಿ :ಕಟ್ಟಿಮನಿ



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಯೋಜನೆಗಳನ್ನು ಫಲಾನುಭವಿಗಳ ಮನೆ ಬಾಗಿಲಿಗೆ ತಲುಪಿಸುವುದಕ್ಕಾಗಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪಿಂಚಣಿ ಅದಾಲತ್ ಹಮ್ಮಿಕೊಳ್ಳಲಾಗಿದೆ ಎಂದು ಗ್ರೇಡ 2 ತಹಶೀಲ್ದಾರ ಜಿ.ಎನ್.ಕಟ್ಟಿಮನಿ ಹೇಳಿದರು.

ತಾಲೂಕಿನ ಹುಲ್ಲೂರು ಗ್ರಾಮದ ಮಾರುತೇಶ್ವರ ದೇವಸ್ಥಾನದಲ್ಲಿ ನಡೆದ ಪಿಂಚಣಿ ಅದಾಲತ್ ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಪಿಂಚಣಿ ಅದಾಲತ್ ಸಾಕಷ್ಟು ಸಹಕಾರಿಯಾಗಲಿದೆ. ಈ ಸೇವೆಯಿಂದ ಬರುವ ದಿನಗಳಲ್ಲಿ ಫಲಾನುಭವಿಗಳು ಕಚೇರಿಗೆ ಅಲೆಯುವದು ತಪ್ಪುತ್ತದೆ. ಅದಾಲತ್ ನಲ್ಲಿ ಸಲ್ಲಿಕೆಯಾದ ಅರ್ಜಿಗಳ ಪೈಕಿ, ಕೆಲವನ್ನು ಕಂದಾಯ ಇಲಾಖೆ ಸಿಬ್ಬಂದಿಗಳೊಂದಿಗೆ ಚರ್ಚಿಸಿ ಸ್ಥಳದಲ್ಲಿಯೇ ಇತ್ಯರ್ಥಪಡಿಸಲಾಗಿದೆ. ಹೊಸದಾಗಿ ಪಿಂಚಣಿಗೆ ಸಲ್ಲಿಕೆಯಾಗಿರುವ ಅರ್ಜಿಗಳನ್ನು ಪರಿಶೀಲಿಸಿ ಶೀಘ್ರದಲ್ಲಿ ಆದೇಶ ಪತ್ರಗಳನ್ನು ತಮ್ಮ ಮನೆಗೆ ಬಂದು ವಿತರಿಸಲಾಗುವದು ಎಂದು ಹೇಳಿದರು.

ಗ್ರಾ.ಪಂ ಸದಸ್ಯ ಶಿವಾನಂದ ಲಮಾಣಿ ಮಾತನಾಡಿ, ಯೋಜನೆಗಳ ಪ್ರಯೋಜನ ಪಡೆಯಲು ಜನರು ಕಚೇರಿಗಳಿಗೆ ಅಲೆಯುವ ಬದಲು, ಅಧಿಕಾರಿಗಳೇ ಫಲಾನುಭವಿಗಳ ಮನೆ ಬಾಗಿಲಿಗೆ ಬಂದು ಪಿಂಚಣಿ ಯೋಜನೆ ಬಗ್ಗೆ ಅರಿವು ಮೂಡಿಸುತ್ತಿರುವದು ಶ್ಲಾಘನೀಯ ಮತ್ತು ಸ್ವಾಗತಾರ್ಹ. ಫಲಾನುಭವಿಗಳಿಗೆ ಸರಕಾರದ ಯೋಜನೆಗಳನ್ನು ಸಮರ್ಪಕವಾಗಿ ಒದಗಿಸಬೇಕು. ಸಮಾಜದ ಕಟ್ಟ ಕಡೆಯ ವ್ಯಕ್ತಿಗೂ ಸರ್ಕಾರದ ಸವಲತ್ತುಗಳು ತಲುಪಬೇಕು. ಈ ನಿಟ್ಟಿನಲ್ಲಿ ಜವಾಬ್ದಾರಿಯುತ ಸರ್ಕಾರಿ ನೌಕರರು ಕೈ ಜೋಡಿಸಿ ಯೋಜನೆಗಳ ಸಾಕಾರಕ್ಕೆ ಮುಂದಾಗಬೇಕು. ಕಂದಾಯ ಇಲಾಖೆಯಿಂದ ಅಂಗವಿಕಲ, ವಿಧವಾ, ಸಂಧ್ಯಾ ಸುರಕ್ಷಾ ವೇತನ ಮುಂತಾದ ಹಲವು ಪಿಂಚಣಿ ಯೋಜನೆ ಅರ್ಹರಿಗೆ ತಲುಪಿಸಬೇಕು ಎಂದು ಹೇಳಿದರು.

ಪಂಚಾಯತ ಅಭಿವೃದ್ಧಿ ಅಧಿಕಾರಿ ಅರವಿಂದ ಲೋನಾರಮಠ ಮಾತನಾಡಿ, ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಸಿಗುವ ಸರಕಾರದ ಯೋಜನೆಗಳ ಬಗ್ಗೆ ಸಮರ್ಪಕವಾಗಿ ಮಾಹಿತಿ ಪಡೆದು ಸರಕಾರದ ಯೋಜನೆಗಳನ್ನು ಸದುಪಯೋಗ ಪಡೆದುಕೊಳ್ಳುವಂತೆ ಸಲಹೆ ನೀಡಿದರು.

ಇದೇ ವೇಳೆ ಸ್ಥಳೀಯ ಮತ್ತು ಸುತ್ತಮುತ್ತಲಿನ 6 ಗ್ರಾಮದ ಹಲವಾರು ಅರ್ಹ ಫಲಾನುಭವಿಗಳಿಗೆ ಯೋಜನೆಗಳ ಮಂಜೂರಾತಿ ಪತ್ರಗಳನ್ನು ವಿತರಿಸಿದರು. ಢವಳಗಿ ಉಪತಹಶೀಲ್ದಾರ ಎಸ್.ಪಿ.ಭಾವಿಕಟ್ಟಿ, ಗ್ರಾಮ ಲೆಕ್ಕಾಧಿಕಾರಿ ಮನೋಜ ರಾಠೋಡ, ಪಂಚಾಯತ ಕಾರ್ಯದರ್ಶಿ, ಎಸ್.ಡಿ.ಎ, ಎಮ್.ಡಿ.ಮಲ್ಲಾಬಾದಿ, ಕಂಪ್ಯೂಟರ್ ಆಪರೇಟರ ರಾಮಕೃಷ್ಣ ಗುಡಿಮನಿ, ಪ್ರಕಾಶ ಕಟ್ಟಿಮನಿ, ಸೇರಿದಂತೆ ಮತ್ತೀತರರು ಇದ್ದರು.

# ರೂ.2 ಕೋಟಿ ವೆಚ್ಚದಲ್ಲಿ ಟ್ರೀ ಪಾರ್ಕ್ ನಿರ್ಮಾಣ :ಶಾಸಕ ಮನಗೂಳಿ

**ಉದಯರಶ್ಮಿ ನ್ಯೂಸ್**



ಸಿಂದಗಿ: ವ್ಯಾಪಕವಾಗಿ ಬೆಳೆಯುತ್ತಿರುವ ಸಿಂದಗಿ ನಗರದಲ್ಲಿ 2 ಎಕರೆ 34 ಗುಂಟೆಯಲ್ಲಿ ಅಂದಾಜು 2 ಕೋಟಿ ಅನುದಾನದಲ್ಲಿ ವಿನೂತನವಾದ ಟ್ರೀ ಪಾರ್ಕ್ ರೂಪುಗೊಳ್ಳಲಿದೆ ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ವಿಜಯಪುರ ಪ್ರಾದೇಶಿಕ ಅರಣ್ಯ ವಿಭಾಗ ಹಾಗೂ ಸಿಂದಗಿ ಪ್ರಾದೇಶಿಕ ಅರಣ್ಯ ವಲಯ ಇವುಗಳ ಸಂಯುಕ್ತಾಶ್ರಯದಲ್ಲಿ ಸೋಮವಾರ ಹೊನ್ನಪ್ಪಗೌಡರ ಲೇಔಟ್ ದಲ್ಲಿ ಟ್ರೀ ಪಾರ್ಕ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಪಟ್ಟಣದ ವಿವಿಧ ಬಡಾವಣೆಗಳಲ್ಲಿ ಉದ್ಯಾನವನಕ್ಕೆ ಮೀಸಲಿಟ್ಟ ಜಾಗೆಯನ್ನು ಅಭಿವೃದ್ಧಿ ಪಡಿಸಿ ಹಿರಿಯರಿಗೆ ಮಕ್ಕಳಿಗೆ ಅನುಕೂಲವಾಗಲು ಪಣ ತೊಟ್ಟಿದ್ದೇನೆ. ಪ್ರಸ್ತುತ ಭೂಮಿ ಪೂಜೆಯಾದ ಕಾಮಗಾರಿಗೆ ಸದ್ಯ 1 ಕೋಟಿ ಅನುದಾನ ಬಿಡುಗಡೆಯಾಗಿದೆ. 2024–25 ನೇ ಸಾಲಿನಲ್ಲಿ ಮತ್ತೆ ರೂ.1 ಕೋಟಿ ಅನುದಾನ ಸರಕಾರ ನೀಡಲಿದೆ ಎಂದ ಅವರು ಆನಂದ ಟಾಕೀಜ್ ಹತ್ತಿರವಿರುವ ಹಳೆಯ ತಹಶೀಲ್ದಾರ ಕಛೇರಿಯನ್ನು ಮೆಗಾ ಮಾರ್ಕೆಟ್ ಮಾಡಲು ಅಂದಾಜು 27 ಕೋಟಿಯ ಯೋಜನೆಯು ಸರ್ಕಾರದ ಮುಂದಿದೆ. ಆಲಮೇಲ ರಸ್ತೆಯಲ್ಲಿನ ಮಿನಿ ವಿಧಾನಸೌಧಕ್ಕೆ ಇನ್ನೂ ಅಂದಾಜು ರೂ.5 ಕೋಟಿ ಕೊರತೆ ಇದೆ. ಆ ಅನುದಾನವನ್ನು ಕೂಡಲೇ ನೀಡಿ ಮಿನಿ ವಿಧಾನಸೌಧದ ಕಾರ್ಯ ಪೂರ್ಣಗೊಂಡಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ತಹಶೀಲ್ದಾರ ಕಛೇರಿಯನ್ನು ಪುರಸಭೆ ಕಾರ್ಯಾಲಯವಾಗಿ ಪರಿವರ್ತಿಸುವ ಯೋಚನೆಯಲ್ಲಿದ್ದೇವೆ. ಸಿಂದಗಿ ನಗರಕ್ಕೆ ಅಮೃತ–2 ಯೋಜನೆಯಲ್ಲಿ ರೂ 46 ಕೋಟಿ ಅನುದಾನದಲ್ಲಿ ಮನೆಮನೆಗೆ ಕುಡಿಯುವ ನೀರಿನ ಕಾಮಗಾರಿಯನ್ನು ಆದಷ್ಟು ಬೇಗನೆ ಪ್ರಾರಂಭ ಮಾಡಲು ಎಲ್ಲ ಸಿದ್ದತೆಗಳನ್ನು ಮಾಡುತ್ತಿದ್ದೇವೆ ಎಂದರು.

ಈ ವೇಳೆ ಸಾನಿಧ್ಯ ವಹಿಸಿದ ಸ್ಥಳೀಯ ಸಾರಂಗಮಠದ ಡಾ ಪ್ರಭುಸಾರಂಗದೇವ ಶಿವಾಚಾರ್ಯರು ಮತ್ತು ಇಂಡಿ ಉಪವಿಭಾಗಾಧಿಕಾರಿ ಅಬೀದ ಗದ್ಯಾಳ ಮಾತನಾಡಿ, ಗಿಡ ಮರಗಳು ಇಲ್ಲದಿದ್ದಲ್ಲಿ ಪ್ರಾಣಿ ಸಂಕುಲವೇ ನಾಶವಾಗುತ್ತದೆ. ಪ್ರತಿಯೊಬ್ಬರು ಪರಿಸರವನ್ನು ಪ್ರೀತಿಸಿ ಗಿಡ ಮರಗಳನ್ನು ಬೆಳೆಸುವ ಕಾಯಕದಲ್ಲಿರಬೇಕು ಎಂದರು.

ಈ ಸಂಧರ್ಭದಲ್ಲಿ ತಹಶೀಲ್ದಾರ ಪ್ರದೀಪಕುಮಾರ ಹಿರೇಮಠ, ಪುರಸಭೆ ಮುಖ್ಯಾಧಿಕಾರಿ ಗುರುರಾಜ ಚೌಕಿಮಠ, ಅರಣ್ಯ ಇಲಾಖೆಯ ಅಧಿಕಾರಿಗಳಾದ ಶಿವಶರಣಯ್ಯ, ಭಾಗ್ಯವಂತ ಮಸೂದಿ, ರಾಜು ಬಿರಾದಾರ, ಎಸ್. ಎಸ್.ಬಿರಾದಾರ, ಮಿಟ್ಟೆಸಾ ಮುಲ್ಲಾ, ಎಮ್.ವಾಯ್.ಮಲಕಣ್ಣವರ, ಡಾ.ಮುತ್ತು ಮನಗೂಳಿ. ದಯಾನಂದ ಬಿರಾದಾರ. ಮಂಜುನಾಥ ಬಿಜಾಪೂರ, ಮುತ್ತು ಮುಂಡೇವಾಡಗಿ, ಚನ್ನು ಪಟ್ಟಣಶೆಟ್ಟಿ, ರಮೇಶ ಹೂಗಾರ, ಸತೀಶ ಬಿರಾದಾರ, ಮಲ್ಲಿಕಾರ್ಜುನ ಅಲ್ಲಾಪೂರ, ಉಮೇಶ ಪೂಜೇರಿ, ಅಶೋಕ ಯಡ್ರಾಮಿ, ರಜತ ತಾಂಬೆ, ಭೀಮು ವಾಲೀಕಾರ ಸೇರಿದಂತೆ ಅನೇಕರು ಇದ್ದರು.

### 'ಹಲೋ ಸಖಿ' ಬಳಗದಿಂದ ವಿಶ್ವ ಮಹಿಳಾ ದಿನಾಚರಣೆಯಲ್ಲಿ 'ಉದಯರಶ್ಮಿ' ಪ್ರಕಾಶಕಿ ಶೈಲಾ ಮಣೂರ ಅಭಿಮತ

# ಪುರುಷರಿಗಿಂತ ಹೆಚ್ಚಿನ ಜವಾಬ್ದಾರಿ ನಿರ್ವಹಿಸುತ್ತಿರುವ ಮಹಿಳೆಯರು

**ಉದಯರಶ್ಮಿ ನ್ಯೂಸ್**



ವಿಜಯಪುರ: ಕುಟುಂಬದ ಜೊತೆಗೆ ಸಮಾಜ ಹಾಗೂ ರಾಷ್ಟ್ರ ನಿರ್ಮಾಣದಲ್ಲೂ ಮಹಿಳೆಯರ ಪಾತ್ರ ಪ್ರಮುಖವಾಗಿದೆ. ಅವರ ತ್ಯಾಗವನ್ನು ಗುರುತಿಸಲು ಮತ್ತು ಸಮಾಜದಲ್ಲಿ ಅವರಿಗೆ ಸಮಾನ ಹಕ್ಕುಗಳನ್ನು ಕಲ್ಪಿಸುವ ಸಲುವಾಗಿ ಪ್ರತಿ ವರ್ಷ ಮಾ.08 ರಂದು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಗುತ್ತದೆ ಎಂದು

ಶಿಕ್ಷಕಿ ಸುಮಂಗಲಾ ಕೋಳೂರ ಹೇಳಿದರು.

ಸೋಮವಾರ ಸಂಜೆ ನಗರದ ಖಾಸಗಿ ಹೊಟೇಲನಲ್ಲಿ 'ಹಲೋ ಸಖಿ' ಸ್ನೇಹಿತೆಯರ ಬಳಗ ಏರ್ಪಡಿಸಿದ 'ವಿಶ್ವ ಮಹಿಳಾ ದಿನಾಚರಣೆ' ಕಾರ್ಯಕ್ರಮಕ್ಕೆ ಕೇಕ್ ಕತ್ತರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಸೌಂದರ್ಯ ತಜ್ಞೆ ರೇಖಾ ಜಿನಗೊಂಡ ಮಾತನಾಡಿ, ಮಹಿಳೆಯೇ ಇಲ್ಲದ ವಿಶ್ವವನ್ನು ಊಹಿಸಲು ಸಾಧ್ಯವೇ ಇಲ್ಲ. ಮಹಿಳೆ ಎಂದರೆ ಶಕ್ತಿ, ಮಹಿಳೆ ಎಂದರೆ ಧೈರ್ಯ, ಮಹಿಳೆ ಎಂದರೆ ಪ್ರೀತಿ, ಮಹಿಳೆ ಎಂದರೆ ಕಾಳಜಿ. ಹೀಗೆ ಮಹಿಳೆ ಪ್ರತಿಯೊಬ್ಬರ ಬದುಕಿನಲ್ಲೂ ನಿರ್ವಹಿಸುವ ಪಾತ್ರಗಳು ಹಾಗೂ ನಿರ್ವಹಿಸುವ ಜವಾಬ್ದಾರಿಗಳೂ ಹಲವಾರು ಎಂದು ಹೇಳಿದರು.

'ಉದಯರಶ್ಮಿ' ದಿನಪತ್ರಿಕೆಯ ಪ್ರಕಾಶಕಿ ಶೈಲಾ ಮಣೂರ ಮಾತನಾಡಿ, ಇಂದು ಪುರುಷರಿಗಿಂತ ಮಹಿಳೆಯರೇ ಹೆಚ್ಚಿನ ಜವಾಬ್ದಾರಿ ನಿಭಾಯಿಸುತ್ತಿದ್ದಾರೆ. ಮಹಿಳೆಯರಿಂದು ಕೇವಲ ಕುಟುಂಬಕ್ಕೆ ಸೀಮಿತವಾಗದೆ, ರಾಜಕೀಯ, ಶಿಕ್ಷಣ, ವಿಜ್ಞಾನ ಹೀಗೆ ಹತ್ತು–ಹಲವು ಕ್ಷೇತ್ರಗಳಲ್ಲಿ ಮಹಿಳೆಯರ ಸಾಧನೆ ಅಪಾರವಾಗಿದೆ. ಕಾರಣ ಪಾಲಕರು ಮಕ್ಕಳಲ್ಲಿ ಹೆಣ್ಣು–ಗಂಡು, ಜಾತಿ–ಮತವೆಂಬ ಭೇದಭಾವ ತಾರದಂತೆ ಬೆಳೆಸಬೇಕು ಎಂದು ಸಲಹೆ ನೀಡಿದರು.

'ಹಲೋ ಸಖಿ' ಸದಸ್ಯರಾದ ಚೇತನಾ ಮಠ, ಸೋನಾ ಕುಲಕರ್ಣಿ, ಮೀನಾ ಕುಲಕರ್ಣಿ, ವೈಶಾಲಿ ಬಡಿಗೇರ, ಗಿರಿಜಾ ಸೊನ್ನದ, ಶಿಕ್ಷಕಿ ಶರ್ಷಾದ ಅತನೂರ ಸೇರಿದಂತೆ ಇತರರಿದ್ದರು.

### ನಿಡಗುಂದಿ: ಮಾ.13ರಂದು ಗ್ಯಾರಂಟಿ ಯೋಜನೆಗಳ ಸಮಾವೇಶ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಬಸವನ ಬಾಗೇವಾಡಿ ವಿಧಾನಸಭಾ ಮತಕ್ಷೇತ್ರದ ಬಸವನಬಾಗೇವಾಡಿ, ಕೊಲ್ಹಾರ, ನಿಡಗುಂದಿ ತಾಲೂಕಿಗೆ ಸಂಬಂಧಿಸಿದಂತೆ ಇದೇ ಮಾ.13ರಂದು ಸಂಜೆ 4 ಗಂಟೆಗೆ ಗ್ರಾಮೀಣ ವಿದ್ಯಾವರ್ಧಕ ಸಂಘ ನಿಡಗುಂದಿಯಲ್ಲಿ 5 ಗ್ಯಾರಂಟಿ ಯೋಜನೆಗಳ ತಾಲೂಕಾ ಮಟ್ಟದ ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ.

ಸಮಾವೇಶದಲ್ಲಿ ಬಸವನಬಾಗೇವಾಡಿ ಮತಕ್ಷೇತ್ರದ ಎಲ್ಲ ಫಲಾನುಭವಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ವಿಜಯಪುರ ಉಪವಿಭಾಗಾಧಿಕಾರಿ ಶ್ವೇತಾ ಬಿಡಿಕರ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಕಾಂಗ್ರೆಸ್‌ನಿಂದ ಬಂಜಾರಾ ಸಮಾಜಕ್ಕೆ ಅನ್ಯಾಯ

**ಉದಯರಶ್ಮಿ ನ್ಯೂಸ್**




ವಿಜಯಪುರ: ಬರಲಿರುವ ಲೋಕಸಭೆ ಚುನಾವಣೆ ಹಾಗೂ ಮುಂಬರುವ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಸರಿಯಾದ ಪಾಠ ಕಲಿಸಲು ಬಂಜಾರಾ ಸಮಾಜ ಪ್ರತಿಜ್ಞೆ ಮಾಡಿದೆ. ಸಮಾಜದ ಗುರು ಸಂತ ಶ್ರೀ ಸೇವಾಲಾಲ್‌ರ ಹೆಸರಿನಲ್ಲಿ ಪ್ರಮಾಣ ಮಾಡಿ ಯಾವುದೇ ಕಾರಣಕ್ಕೆ ರಾಜ್ಯದಲ್ಲಿ ಇನ್ನು ಮುಂದೆ ಕಾಂಗ್ರೆಸ್ ಪಕ್ಷವು ಅಧಿಕಾರಕ್ಕೆ ಬರಲು ಬಿಡುವುದಿಲ್ಲ ಎಂದು ರಾಜ್ಯ □□□ಂಟಿ ಕರಪ್ಷನ್ ಫೌಂಡೇಶನ್ ಆಫ್ ಇಂಡಿಯಾ ಅಧ್ಯಕ್ಷ ಬಿ.ಬಿ. ಲಮಾಣಿ ಗುಡುಗಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಕಳೆದ ವಿಧಾನ ಸಭೆ ಚುನಾವಣೆ ಸಂದರ್ಭದಲ್ಲಿ ಬಿಜೆಪಿ ಸರಕಾರ ಬಂಜಾರಾ ಸಮಾಜದ ಸದಾಶಿವ ಆಯೋಗವನ್ನು ಜಾರಿಗೆ ತಂದಿದ್ದಕ್ಕೆ ಬಂಜಾರಾ ಸಮಾಜ ಯಾವ ರೀತಿ ಪ್ರತಿಭಟನೆ ಮಾಡಿತು. ಅದು ಕಾಂಗ್ರೆಸ್ಸಿಗೆ ಗೊತ್ತೇ ಇದೆ. ಅದರ ಪ್ರತಾಪದಿಂದ ಬಿಜೆಪಿಯು ರಾಜ್ಯದಲ್ಲಿ ತನ್ನ ಸರಕಾರವನ್ನೇ ಕಳೆದುಕೊಂಡಿದ್ದನ್ನು ಸ್ವತಃ ಬಿಜೆಪಿ ರಾಜ್ಯ ನಾಯಕರೇ ಒಪ್ಪಿಕೊಂಡಿದ್ದಾರೆ. ಈ ಸಲ ಸಮಾಜವು ಸುಮ್ಮನೇ ಕೂಡದು. ಅತೀ ಶೀಘ್ರದಲ್ಲಿ ವಿಜಯಪುರ ಜಿಲ್ಲೆಯಲ್ಲಿ ಹಾಗೂ ರಾಜ್ಯಾದ್ಯಾಂತ ಕಾಂಗ್ರೆಸ್ ಪಕ್ಷದ ವಿರುದ್ಧ ಪ್ರತಿಭಟನೆಯನ್ನು ಕೈಕೊಳ್ಳಲಾಗುವುದು ಎಂದು ಬಿ.ಬಿ. ಲಮಾಣಿ ತಿಳಿಸಿದ್ದಾರೆ.

# ಧೂರ್ತ

**ಉದಯರಶ್ಮಿ ದಿನಪತ್ರಿಕೆ**



**ವಿದ್ಯಾರ್ಥಿನಿಧಿ**

– ಮಂಡ್ಯ.ಮ.ನಾ.ಉಡುಪ

ಅದೊಂದು ಕಾಡು. ಅಲ್ಲಿ ನಾನಾ ರೀತಿಯ ಪ್ರಾಣಿಗಳು ವಾಸಿಸುತ್ತಿದ್ದವು. ಅವುಗಳಲ್ಲಿ ತೋಳವೊಂದಿತ್ತು. ತೋಳವು ಚಿಕ್ಕಪುಟ್ಟ ಪ್ರಾಣಿಗಳನ್ನು ತಿಂದು ಹಸಿವನ್ನು ನೀಗಿಸಿಕೊಳ್ಳುತಿತ್ತು.

ಒಮ್ಮೆ ಕಾಡಿನ ಪಕ್ಕದಲ್ಲಿನ ಗುಹೆಯಿಂದ ಸಿಂಹವೊಂದು ಜೋರಾಗಿ ಘರ್ಜನೆ ಮಾಡುತ್ತಾ ಕಾಡನ್ನು ಪ್ರವೇಶಮಾಡಿತು. ಸಿಂಹದ ಘರ್ಜನೆ ಕೇಳಿದ ಕಾಡಿನ ಪ್ರಾಣಿಗಳೆಲ್ಲ ನಡುಗಿಹೋದವು. ಬೆಟ್ಟದ ಮೇಲಿನಿಂದ ಬರುತಿದ್ದ ತೋಳಕ್ಕೂ ಸಿಂಹದ ಘರ್ಜನೆ ಕೇಳಿತು. ಅದು ಗಡಿಬಿಡಿಯಲ್ಲಿ ಓಡವಾಗ ಬೆಟ್ಟದಿಂದ ಕೆಳಗಿನ ಕಮರಿಯೊಂದಕ್ಕೆ ಬಿತ್ತು. ಬಿದ್ದ ರಭಸಕ್ಕದು ಎದ್ದು ಓಡಾಡದ ಸ್ಥಿತಿ ತಲುಪಿತು.

ಸಿಂಹ ಕಾಡೆಲ್ಲವನ್ನು ಸುತ್ತಿ ಗುಹೆಗೆ ಹೊರಟು ಹೋಯಿತು. ಕಾಡು ಮತ್ತೆ ಪ್ರಶಾಂತವಾಯಿತು.

ಇದೇ ಸಮಯದಲ್ಲಿ ಮೊಲವೊಂದು ಹುಲ್ಲು ಹುಡುಕಿಕೊಂಡು ಹೊರಟಿತ್ತು. ದಾರಿಯಲ್ಲಿ ಕಮರಿಯೊಳಗೆ ಬಿದ್ದ ತೋಳವನ್ನು ನೋಡಿತು. ತೋಳವು ದೈನ್ಯವಾದ ದನಿಯಿಂದ ಕೇಳಿತು

" ಮಿತ್ರಾ ನಾನು ಹಸಿವು ಮತ್ತೆ ಬಾಯಾರಿಕೆಯಿಂದ ಬಳಲಿಹೋಗಿರುವೆ. ಕನಿಕರಿಸಿ ಸ್ವಲ್ಪ ಪಕ್ಕದ ಹಳ್ಳದಿಂದ ನೀರು ತಂದುಕೊಡಬಲ್ಲೆಯಾ... ? "

ಆಗ ಮೊಲವು ಹೇಳಿತು

" ಮಿತ್ರಾ ನಾನೇನಾದರೂ ನೀರು ತೆಗೆದುಕೊಂಡು ನಿನ್ನ ಬಳಿಗೆ ಬಂದರೆ ನಿನಗೆ ಬಾಯಾರಿಕೆ ಜೊತೆಗೆ ನಿನ್ನ ಹಸಿವಿನಿಂದಾಗಿ ನನ್ನ ಪ್ರಾಣವೂ ಹೋಗುತ್ತದೆ.." ಎಂದು ಹೊರಟುಹೋಯಿತು.

"ದುಷ್ಟರು ಎಂಥಹ ದಯನೀಯ ಸ್ಥಿತಿಯಲ್ಲಿದ್ದಾಗಲೂ ದುರ್ಬಲರನ್ನು ಹಿಂಸಿಸದೇ ಬಿಡರು.



**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR